ಸಂಪುಟ : 10 ಸಂಚಿಕೆ 13 ಪುಟ : 4+2 ಬೆಲೆ: 3.00 ಶನಿವಾರ ಫೆಬ್ರವರಿ 8 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 13 Pages : 4+2 Price : 3.00 Saturday February 8 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ 8 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 21, 22 – ವಿಜಯನಗರ ಶಾಲೆ, ಕರುಗಲ್ ಲೇಔಟ್, ಟವರ್ ಕಂಬ, ವಾಲ್ಮೀಕಿ ಭವನ, ಕಮತರ ಪ್ಲಾಟ್, ಶಿಗ್ಗಾವಿ ಲೇಔಟ್, ಗಾರ್ಡನ್ ಲೈನ್. ವಾರ್ಡ್ ನಂ. 34, 35 – ಕರಡಿಗೋಳ ಮಠ, ಸೇವಾಲಾಲ್ ನಗರ, ಕೆ ಇ ಬಿ ಲೇಔಟ್, ಅಧ್ಯಕ್ಷರ ಮನೆ ಭಾಗ, ಲಕ್ಷ್ಮಣಸಾ ನಗರ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 16, 18, 19 – ಅಂಬೇಡ್ಕರ್ ನಗರ, ಮಡಿವಾಳ ದೇವರ ಗುಡಿ, ಬಾಗಲಕೋಟಿಯವರ ಲೈನ್, ಕುಂಬಾರ ಓಣಿ 2 ಭಾಗಗಳು, ಹನುಮಂತ ದೇವರು ಗುಡಿ, ಕೋನೆರಿ ಹೊಂಡ, ಡೊರಗಲ್ಲಿ. ವಾರ್ಡ್ ನಂ. 29 – ಟೀಚರ್ಸ್ ಕಾಲೋನಿ ಪೂರ್ತಿ ಭಾಗಗಳು. ವಾರ್ಡ್ ನಂ. 1 – ಎಸ್ ಎಂ ಕೃಷ್ಣ ನಗರ ಪೂರ್ತಿ ಭಾಗಗಳು. ವಾರ್ಡ್ ನಂ 5 – ಶಿವನಾಗ ನಗರ, ಗಣೇಶ ನಗರ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಮತ್ತು ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಚಾಲನೆ

# ದೈಹಿಕ, ಮಾನಸಿಕ ಸದೃಢತೆಗೆ ಕ್ರೀಡೆ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ವ್ಯಕ್ತಿಯು ದೈನಂದಿನವಾಗಿ ಕ್ರಿಯಾಶೀಲತೆಯಿಂದ ಹಾಗೂ ಉತ್ಸಾಹದಿಂದ ಕಾರ್ಯನಿರ್ವಹಿಸಲು ದೈಹಿಕ ಹಾಗೂ ಮಾನಸಿಕ ಸದೃಢತೆ ಕಾಪಾಡಿಕೊಳ್ಳಲು ಕ್ರೀಡೆ ಸಹಕಾರಿಯಾಗಿದೆ ಎಂದು ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಹೇಳಿದರು.

ಜಿಲ್ಲಾ ಪಂಚಾಯತ್ ಗದಗ ಅವರಿಂದ ನಗರದ ಕೆಎಚ್ ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ 2024-25ನೇ ಸಾಲಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಧಿಕಾರಿಗಳ ಹಾಗೂ ಸಿಬ್ಬಂದಿಗಳ ಜಿಲ್ಲಾ ಮಟ್ಟದ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ದೈನಂದಿನ ಸರ್ಕಾರಿ ನೌಕರಿಯಲ್ಲಿ ಸಾರ್ವಜನಿಕ ಸೇವೆಯಲ್ಲಿರುವವರು ಸಂಯಮದಿಂದ ಹಾಗೂ ಹೆಚ್ಚು ಕ್ರಿಯಾಶೀಲವಾಗಿ ಕಾರ್ಯ ನಿರ್ವಹಣೆಗೆ ಮಾನಸಿಕ ಆರೋಗ್ಯವು ಪ್ರಮುಖವಾಗಿದೆ. ಮಾನಸಿಕ ಆರೋಗ್ಯ ಕಾಯ್ದುಕೊಳ್ಳಲು ದಿನನಿತ್ಯದ ಜೀವನ ಶೈಲಿಯಲ್ಲಿ ದೈಹಿಕ ಕ್ರೀಡಾ ಚಟುವಟಿಕೆಯಿಂದ ಕೂಡಿರಬೇಕಾಗುತ್ತದೆ ಎಂದರು.

ಸರ್ಕಾರದಿಂದ ನೌಕರರ ಆರೋಗ್ಯ ಸುಧಾರಣೆಗೆ ಹಾಗೂ ಮಾನಸಿಕ ದೈಹಿಕ ಸದೃಢತೆಗೆ ಕ್ರೀಡಾ ಚಟುವಟಿಕೆಗಳನ್ನ ಹಮ್ಮಿಕೊಂಡು ಬರಲಾಗುತ್ತಿದ್ದು, ನೌಕರರು ಕೀಳರಿಮೆ ತೊರೆದು ಕ್ರೀಡಾಕೂಟದಲ್ಲಿ ಪಾಲ್ಗೊಂಡು, ತಮ್ಮ ಅಭಿವ್ಯಕ್ತಿ ಪ್ರದರ್ಶಿಸಬೇಕು ಎಂದರು.



ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಗೆಲವು ಸಾಧಿಸಿದವರು ರಾಜ್ಯಮಟ್ಟದಲ್ಲಿ ಪಾಲ್ಗೊಂಡು ಗದಗ ಜಿಲ್ಲೆಗೆ ಕೀರ್ತಿ ತರಬೇಕು. ಆ ಮೂಲಕ ಗದಗ ಜಿಲ್ಲೆ ಎಲ್ಲ ರಂಗದಲ್ಲಿಯೂ ಉತ್ತಮ ಪ್ರದರ್ಶನ ಕಾಣುವಂತಾಗಬೇಕು ಎಂದರು.

ಸರ್ಕಾರಿ ನೌಕರರ ಸಂಘದ ರಾಜ್ಯ ಹಿರಿಯ ಉಪಾಧ್ಯಕ್ಷ ರವಿ ಗುಂಜಿಕರ ಮಾತನಾಡಿ, ನೌಕರರ ಕ್ಷೇಮಾಭಿವೃದ್ಧಿಗೆ ಸಂಘವು ಸದಾ ನಿಮ್ಮೊಂದಿಗಿರುತ್ತದೆ ಎಂದರು. ಕ್ರೀಡೆಗಳಲ್ಲಿ ಹುಚ್ಚು ಉತ್ಸುಕತೆಯಿಂದ ಪಾಲ್ಗೊಳ್ಳುವ ಮೂಲಕ ನೌಕರ ಬಾಂಧವರು ಕ್ರೀಡಾ ಸ್ಫೂರ್ತಿ ಮೆರೆಯಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಉಪ ಕಾರ್ಯದರ್ಶಿ ಸಿ ಆರ್ ಮುಂಡರಗಿ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ರಮೇಶ ಪಾಟೀಲ, ಕ್ರೀಡಾಧಿಕಾರಿ ಶರಣು ಗೋಗೇರಿ ಸೇರಿದಂತೆ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ನೌಕರರು ಉಪಸ್ಥಿತರಿದ್ದರು.

> ಕ್ರೀಡಾಕೂಟದಲ್ಲಿ ಎಲ್ಲರೂ ಭಾಗವಹಿಸುವುದು ಮುಖ್ಯ. ಸೋಲು ಗೆಲುವಲ್ಲ ಎಂಬುದನ್ನು ಎಲ್ಲರೂ ತಿಳಿದುಕೊಳ್ಳಬೇಕು, ಉತ್ಸಾಹದಿಂದ ಕ್ರೀಡೆಗಳಲ್ಲಿ ಪಾಲ್ಗೊಳ್ಳುವುದರಿಂದ ನಮ್ಮ ದೈಹಿಕ ಆರೋಗ್ಯ ಸುಧಾರಿಸುವುದರೊಂದಿಗೆ ದೈನಂದಿನ ಕರ್ತವ್ಯ ನಿರ್ವಹಣೆಗೆ ಮನಸ್ಸು ಉತ್ಸುಕವಾಗುತ್ತದೆ. ಹಲವಾರು ಕಾಯಿಲೆಗಳಿಂದ ನಮ್ಮ ದೇಹವನ್ನು ಕಾಪಾಡಿಕೊಳ್ಳಲು ಸಹಕಾರಿಯಾಗಲಿದೆ.
>
> –ಸಿ ಎನ್ ಶ್ರೀಧರ್, ಜಿಲ್ಲಾಧಿಕಾರಿಗಳು



## ಫೆ. 10ರಂದು ಲಾವಣಿ, ಗೀಗೀ ಪದ ತರಬೇತಿ ಶಿಬಿರ ಉದ್ಘಾಟನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಜಾನಪದ ಅಕಾಡಮಿ, ಬೆಂಗಳೂರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಗದಗ, ಇವರ ಸಹಯೋಗದಲ್ಲಿ ಲಾವಣಿ ಹಾಗೂ ಗೀಗೀ ಪದ ತರಬೇತಿ ಶಿಬಿರ ಉದ್ಘಾಟನಾ ಸಮಾರಂಭವನ್ನು ಫೆಬ್ರವರಿ 10 ರಂದು ಮುಂಜಾನೆ 10ಗಂಟೆಗೆ ಕೌಶಲ್ಯ ವಿಕಾಸ ಭವನ ,ಆರ್ ಡಿ ಪಿ ಆರ್ ವಿಶ್ವ ವಿದ್ಯಾಲಯದ ಗ್ರಾಮ ಗಂಗೋತ್ರಿ ಆವರಣದಲ್ಲಿ ಜರುಗಲಿದೆ. ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿಗಳು(ಪ್ರ) ಮತ್ತು ಕುಲಸಚಿವರಾದ ಪ್ರೊ. ಡಾ.ಸುರೇಶ ವಿ.ನಾಡಗೌಡರ ಅವರು ಕಾರ್ಯಕ್ರಮದ ಉದ್ಘಾಟನೆ ಗೊಳಿಸುವರು. ಬೆಂಗಳೂರು ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯರಾದ ಶಂಕ್ರಪ್ಪ ರಾಮಪ್ಪ ಸಂಕಣ್ಣವರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ವೀರಯ್ಯ ಸ್ವಾಮಿ ಬಿ.ಹೀರೆಮಠ, ಸಂಸ್ಕೃತಿಕ ಚಿಂತಕರು ಹಾಗು ಡಿ.ಜಿ.ಎಂ. ಆಯುರ್ವೇದ ಮಹಾವಿದ್ಯಾಲಯದ ವಿಶ್ರಾಂತ ಪ್ರಾಚಾರ್ಯ ಡಾ.ಜಿ.ಬಿ.ಪಾಟೀಲ, ಜನಪದ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ವಿರುಪಾಕ್ಷಪ್ಪ ಗೂರನವರ ಆಗಮಿಸುರು. ಸಂಪನ್ಮೂಲ ವ್ಯಕ್ತಿಗಳಾಗಿ ಬಸಪ್ಪ ನೀಲಪ್ಪ ಹಡಗಲಿ, ವೀರಣ್ಣ ಚನ್ನಪ್ಪ ಅಂಗಡಿ, ನಿಂಗಪ್ಪ ದಿಂಡೂರ, ಸಾವಿತ್ರಿಬಾಯಿ ಪೂಜಾರ ಪಾಲ್ಗೊಳ್ಳಲಿದ್ದಾರೆ.

ಬೆಂಗಳೂರು ಕರ್ನಾಟಕ ಜಾನಪದ ಅಕಾಡಮಿ ಅಧ್ಯಕ್ಷರಾದ ಗೊಲ್ಲಹಳ್ಳಿ ಶಿವಪ್ರಸಾದ, ಬೆಂಗಳೂರು ಕರ್ನಾಟಕ ಜಾನಪದ ಅಕಾಡಮಿ ರಿಜಿಸ್ಟ್ರಾರ್ (ಪ್ರ)ಶ್ರೀಮತಿ ಎನ್ ನಮ್ರತಾ ಸ್ವಾಗತ ಕೋರಿದ್ದಾರೆ.

# ಅದ್ದೂರಿಯಾಗಿ ನಡೆದ ಹಠಯೋಗಿ ವೀರಪ್ಪಜ್ಜನವರ ರಥೋತ್ಸವ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಕೋಡಿಕೊಪ್ಪದ ಹಠಯೋಗಿ ಶ್ರೀ ವೀರಪ್ಪಜ್ಜನವರ ಮಹಾರಥೋತ್ಸವವು ಶುಕ್ರವಾರ ಸಂಜೆ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ಸಡಗರ, ಸಂಭ್ರಮದಿಂದ ಜರುಗಿತು.

ನೆರೆದ ಭಕ್ತ ಸಮೂಹ ಹಠಯೋಗಿ ವೀರಪ್ಪಜ್ಜನಿಗೆ ಜಯವಾಗಲಿ, ಹರಹರ ಮಹಾದೇವ ಎಂಬಿತ್ಯಾದಿ ಜಯಘೋಷಣೆಗಳು ಮುಗಿಲು ಮುಟ್ಟುತ್ತಿದ್ದಂತೆ ಭಕ್ತರು ತೇರನ್ನು ಎಳೆಯಲು ಪ್ರಾರಂಭಿಸಿದರು. ಸಕಲ ವಾದ್ಯ ಮೇಳದೊಂದಿಗೆ ತೇರು ಬೇವಿನ ಗಿಡದ ಪಾದಗಟ್ಟೆಯವರೆಗೆ ಸಾಗಿ, ಮರಳಿ ತನ್ನ ಮೂಲ ಸ್ಥಾನಕ್ಕೆ ಬಂದು ತಲುಪಿತು. ಭಕ್ತರು ದೀರ್ಘ ಕರತಾಡನ ಮಾಡಿ ತಮ್ಮ ಸಂತೋಷ ವ್ಯಕ್ತಪಡಿಸಿದರು.




ಈ ಸಾರೆಯ ಜಾತ್ರೆ ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆಯ ಜಾತ್ರೆಯಾಗಿದ್ದರಿಂದ ಶತಮಾನೋತ್ಸವದ ಜಾತ್ರೆಯಲ್ಲಿ ವಿವಿಧ ಭಾಗಗಳಿಂದ ಆಗಮಿಸಿದ್ದ ಅಂದಾಜು 25 ಸಾವಿರಕ್ಕೂ ಅಧಿಕ ಭಕ್ತರು ರಥೋತ್ಸವದಲ್ಲಿ ಪಾಲ್ಗೊಂಡಿದ್ದರು.

ಜಾತ್ರಾಮಹೋತ್ಸವದ ಅಂಗವಾಗಿ ಶುಕ್ರವಾರ ಬೆಳಗ್ಗೆ 6 ಗಂಟೆಗೆ ಕರ್ತೃ ಗದ್ದುಗೆಗೆ ರುದ್ರಾಭಿಷೇಕ, ವಿಶೇಷ ಪೂಜೆ ಕಂಕೈರ್ಯಗಳು ಜರುಗಿದವು. ಸಂಜೆ 5.30ಕ್ಕೆ ಸಹಸ್ರಾರು ಭಕ್ತರ ಮಧ್ಯೆ ಮಹಾರಥೋತ್ಸವದ ತೇರಿನ ಹಗ್ಗವು ಸಿದ್ನೇಕೊಪ್ಪದಿಂದ ಭಜನೆ, ಡೊಳ್ಳು, ಕಹಳೆ ಹಾಗೂ ವಿವಿಧ ವಾದ್ಯ ಮೇಳಗಳೊಂದಿಗೆ ಆಗಮಿಸಿತು. ರಥದ ಕಳಸವು ಸಂಕನಗೌಡ್ರ ಮನೆಯಿಂದ ಮೆರವಣಿಗೆ ಮೂಲಕ ವೀರಪ್ಪಜ್ಜನ ಮಠವನ್ನು ತಲುಪಿತು.

# ಗ್ರಾಮ ಆಡಳಿತ ಅಧಿಕಾರಿ ವೃಂದದಿಂದ ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ವೃಂದದ ವತಿಯಿಂದ ಕೈಗೊಂಡ ಮುಷ್ಕರದ ಯಾವುದೇ ಬೇಡಿಕೆಗಳನ್ನು ರಾಜ್ಯ ಸರಕಾರ ಈಡೇರಿಸದ ಕಾರಣ ರಾಜ್ಯವ್ಯಾಪಿ 2ನೇ ಹಂತದ ಮುಷ್ಕರದಲ್ಲಿ ಅನಿರ್ದಿಷ್ಟಾವದಿ ಎಲ್ಲ ಕೆಲಸಗಳನ್ನು ಸ್ಥಗಿತಗೊಳಿಸಿ ಮುಷ್ಕರದಲ್ಲಿ ಪಾಲ್ಗೊಳ್ಳುವದಾಗಿ ಲಕ್ಷ್ಮೇಶ್ವರ ತಹಸೀಲ್ದಾರರ ಮೂಲಕ ಕಂದಾಯ ಸಚಿವ ಕೃಷ್ಣ ಬೈರೆಗೌಡ ಅವರಿಗೆ ಗ್ರಾಮ ಆಡಳಿತ ಅಧಿಕಾರಿಗಳ ವೃಂದದವರು ಶುಕ್ರವಾರ ಮನವಿ ಸಲ್ಲಿಸಿದರು. ಮನವಿಯಲ್ಲಿ ಕಳೆದ ವರ್ಷ ಸಪ್ಟಂಬರ 26ರಿಂದ ಅಕ್ಟೋಬರ್ 3 ರವರೆಗೆ ರಾಜ್ಯಾದ್ಯಂತ ಮುಷ್ಕರ ನಡೆಸಲಾಗಿತ್ತು. ಈ ಹಂತದಲ್ಲಿ ಸರಕಾರದ ಪ್ರಧಾನ ಕಾರ್ಯದರ್ಶಿಗಳು ಕಂದಾಯ ಇಲಾಖೆಯವರ ಅಧ್ಯಕ್ಷತೆಯಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಎಲ್ಲ ಬೇಡಿಕೆ ಈಡೇರಿಸುವ ಭರವಸೆ ನೀಡಿದ್ದರು. ಈ ಹಿನ್ನಲೆಯಲ್ಲಿ ಅಂದು ಮುಷ್ಕರ ಹಿಂದಕ್ಕೆ ಪಡೆಯಲಾಗಿತ್ತು. ಆದರೆ ಸರಕಾರ ಇಲ್ಲಿಯವರೆಗೆ ಸರಿ ಸುಮಾರು ನಾಲ್ಕು ತಿಂಗಳಾಗಿದ್ದು ಸರ್ಕಾರವು ಈ ವೃಂದದ ನೌಕರರ ಬೇಡಿಕೆಗಳ ವಿಚಾರವಾಗಿ ಯಾವುದೇ ಬೇಡಿಕೆಗಳನ್ನು ಈಡೇರಿಸಿರುವುದಿಲ್ಲ, ಅಲ್ಲದೆ ಮೊದಲಿಗಿಂತ ಕೆಲಸದ ಒತ್ತಡವನ್ನು ಹೆಚ್ಚಿಸಲಾಗಿದೆ ಎಂದು ದೂರಲಾಗಿದೆ. ಈ ಹಿನ್ನಲೆಯಲ್ಲಿ ಬೇಡಿಕೆಗಳ ಈಡೇರಿಕೆಗಾಗಿ ರಾಜ್ಯವ್ಯಾಪಿ ಅನಿರ್ದಿಷ್ಟಾವಧಿಗೆ ಎಲ್ಲಾ ಕೆಲಸಗಳನ್ನು ಸ್ಥಗಿತಗೊಳಿಸಿ ಮುಷ್ಕರ ತೀರ್ಮಾನಿಸಲಾಗಿರುತ್ತದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.




ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ ಮನವಿ ಸ್ವೀಕರಿಸಿದರು. ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ತಾಲೂಕ ಅಧ್ಯಕ್ಷ ಡಿ.ಎಸ್.ಕುಲಕರ್ಣಿ, ಸುಬೇದ್‌ಖಾನ್ ಪಠಾಣ, ಡಿ.ಎಲ್.ವಿಭೂತಿ, ಕೃಷ್ಣಮೂರ್ತಿ, ಲಕ್ಷ್ಮೀ ಓಲೇಕಾರ, ಫಾತಿಮಾ ಫತ್ತೇಖಾನ್, ನಿರ್ಮಲಾ ಹೆಬ್ಬಾಳ, ಸೌಮ್ಯಾ ಕೆ. ಹಲವರಿದ್ದರು.

## ಫೆ.9ರಂದು ಸಹಕಾರಿ ರತ್ನ ದಿ. ಕೆ.ಎಚ್. ಪಾಟೀಲ ಅವರ 33ನೇ ಪುಣ್ಯತಿಥಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರಿ ರತ್ನ ಹಾಗೂ ಸಹಕಾರಿ ರಂಗದ ಭೀಷ್ಮ ದಿ.ಕೆ. ಎಚ್. ಪಾಟೀಲ ಅವರ 33ನೇ ಪುಣ್ಯತಿಥಿ ಅಂಗವಾಗಿ ಗದಗ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ನಗರದ ಕೆ.ಎಚ್. ಪಾಟೀಲ ವೃತ್ತದಲ್ಲಿ ಕೆ.ಎಚ್. ಪಾಟೀಲ ಅವರ ಪುತ್ಥಳಿಗೆ ಮಾಲಾರ್ಪಣೆ ಕಾರ್ಯಕ್ರಮ ಫೆಬ್ರವರಿ 9ರಂದು ಬೆಳಿಗ್ಗೆ 10ಕ್ಕೆ ಹಮ್ಮಿಕೊಳ್ಳಲಾಗಿದೆ.




ಈ ಕಾರ್ಯಕ್ರಮಕ್ಕೆ ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರುಗಳು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯತ್, ತಾಲೂಕ ಪಂಚಾಯತ, ಗ್ರಾಮ ಪಂಚಾಯತ, ಎಪಿಎಂಸಿ ಅಧ್ಯಕ್ಷರು ಹಾಗೂ ಸದಸ್ಯರುಗಳು ಹಾಗೂ ನಗರಸಭೆ, ಪಟ್ಟಣ ಪಂಚಾಯತಿ, ಪುರಸಭೆ ಅಧ್ಯಕ್ಷರುಗಳು ಹಾಗೂ ಸದಸ್ಯರುಗಳು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐ,ಎನ್,ಟಿ,ಯು,ಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೆತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವಿಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲಿಗಲ್ ರೀಫಾರ್ಮ್ಸ್ ವಿಭಾಗ, ಐ,ಟಿ, ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗ, ಅಧ್ಯಕ್ಷರುಗಳು ಹಾಗೂ ಸದಸ್ಯರುಗಳು ಹಾಗೂ ಕೆ.ಎಚ್. ಪಾಟೀಲ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷರಾದ. ಅಶೋಕ ಮಂದಾಲಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ಇಂದು ಪ್ರತಿಬಂಧಕಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಜವಾಹರ ನವೋದಯ ವಿದ್ಯಾಲಯದ 9 ಮತ್ತು 11ನೇ ತರಗತಿ ದಾಖಲಾತಿಗಾಗಿ ಪ್ರವೇಶ ಪರೀಕ್ಷೆಗಳು ಫೆಬ್ರವರಿ 8ರಂದು ಜರುಗಲಿವೆ. ಸದರಿ ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಸಲುವಾಗಿ ಜಿಲ್ಲೆಯ 02ಪರೀಕ್ಷಾ ಕೇಂದ್ರಗಳಾದ ಮುಂಡರಗಿ ತಾಲೂಕಿನಲ್ಲಿರುವ ಜವಾಹರ ನವೋದಯ ವಿದ್ಯಾಲಯ ಕೊರ್ಲಹಳ್ಳಿ ಮತ್ತು ಮುಂಡರಗಿ ತಾಲೂಕಿನ ಎಂ ಎಸ್ ಡಂಬಳ ಬಾಲಕಿಯರ ಪ್ರೌಢಶಾಲೆಯ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಫೆಬ್ರವರಿ 8 ರಂದು ಬೆ.10ರಿಂದ ಮಧ್ಯಾಹ್ನ 3 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.



ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು-ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಸೇರಿದಂತೆ ಇತರೆ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ.ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಹಾಗೂ ಹೊರ ಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ , ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಸಿ.ಎನ್ ಶ್ರೀಧರ ಆದೇಶಿಸಿದ್ದಾರ.

## ಪ್ರಾಣಿ ಬಲಿ: ನಿರ್ಬಂಧಕಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ದೇವರ ಹೆಸರಿನಲ್ಲಿ ಪ್ರಾಣಿ, ಪಕ್ಷಿಗಳ ಬಲಿ ನೀಡುವದು ಕಾನೂನಿಗೆ ವಿರುದ್ಧವಾಗಿರುವುದರಿಂದ ಫೆ. 10ರಿಂದ 13ರ ಮಧ್ಯರಾತ್ರಿವರೆಗೆ ಜರುಗುವ ಗದಗ ಜಿಲ್ಲೆ ಗಜೇಂದ್ರಗಡ ತಾಲೂಕಿನ ಬೊಮ್ಮಸಾಗರದ ದುರ್ಗಾದೇವಿ ಜಾತ್ರೆಯಲ್ಲಿ ದೇವಸ್ಥಾನದ ಆವರಣದಲ್ಲಿ, ಜಾತ್ರಾ ಪರಿಸರದಲ್ಲಿ ಅಥವಾ ಬೊಮ್ಮಸಾಗರ ಗ್ರಾಮದ ವ್ಯಾಪ್ತಿಯಲ್ಲಿ ಸಾರ್ವಜನಿಕರು ಹಾಗೂ ಭಕ್ತರು ದೇವರ ಹೆಸರಿನಲ್ಲಿ ಯಾವುದೇ ರೀತಿಯ ಪ್ರಾಣಿ/ಪಕ್ಷಿ ಬಲಿ ನೀಡುವುದನ್ನು ನಿಷೇಧಿಸಲಾಗಿದೆ. ಈ ಪ್ರದೇಶದ ವ್ಯಾಪ್ತಿಯಲ್ಲಿ ಸಾರ್ವಜನಿಕರು ಹಾಗೂ ಭಕ್ತರು ಕುರಿ, ಕೋಣ, ಆಡು, ಕೋಳಿ, ಇತ್ಯಾದಿ ಪ್ರಾಣಿ/ಪಕ್ಷಿಗಳ ಅನಧಿಕೃತ ಸಾಗಾಟವನ್ನು ಹಾಗೂ ಮಾರಾಟವನ್ನು ,ವಿತ್ತ ಜೀವಿಗಳಿಗೆ ಮಾರಕವಾಗುವ ಯಾವುದೇ ಮಾರಕಾಸ್ತ್ರಗಳನ್ನು (ಕಲ್ಲು, ಬಂದೂಕು. ಭರ್ಚಿ, ಕತ್ತಿ, ಚಾಕು, ಕುಡಗೋಲು, ಕೊಡಲಿ ಹಾಗೂ ಬಡಿಗೆ ಇತ್ಯಾದಿ) ಮತ್ತು ಸ್ಫೋಟಕ ವಸ್ತುಗಳನ್ನು ಸಂಗಡ ಕೊಂಡೊಯ್ಯುವುದನ್ನು ಈ ಪ್ರದೇಶದ ವ್ಯಾಪ್ತಿಯಲ್ಲಿ ಸಾರ್ವಜನಿಕರನ್ನು ಉದ್ವೇಗಕ್ಕೆ ಒಳಗಾಗುವಂತೆ ಘೋಷಣೆಗಳನ್ನು ಕೂಗುವುದು ಹಾಗೂ ಸಾರ್ವಜನಿಕ ಹಿತಕ್ಕೆ ಧಕ್ಕೆ ಅಥವಾ ಸುರಕ್ಷತೆಗೆ ಧಕ್ಕೆ ತರುವ, ಕೃತ್ಯ ಎಸಗುವುದು, ಹಾಗೂ ಇದೇ ಮುಂತಾದ ಕೃತ್ಯಗಳನ್ನು ನಿಷೇಧಿಸಿ ಪ್ರತಿಬಂಧಕಾಜ್ಞೆಯನ್ನು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಸಿ.ಎನ್ ಶ್ರೀಧರ ಅವರು ಆದೇಶಿಸಿದ್ದಾರೆ.

## ಸಂಪಾದಕೀಯ

# ಪ್ರತಿಪಕ್ಷ ಜವಾಬ್ದಾರಿ ಮರೆತ ಬಿಜೆಪಿ

ಭಾರತೀಯ ಜನತಾ ಪಕ್ಷದ ಬಣ ಜಗಳ ಈಗ ಬೀದಿಗೆ ಬಿದ್ದಿದೆ. ವಿಜಯೇಂದ್ರ ಮತ್ತು ಬಸನಗೌಡ ಪಾಟೀಲ ಯತ್ನಾಳ ಬಣ ಜಗಳ ಹಳ್ಳಿಯಿಂದ ದಿಲ್ಲಿ ವರೆಗೂ ತಲುಪಿದರೂ ಸದ್ಯಕ್ಕೆ ಪರಿಹಾರವಾಗುವ ಲಕ್ಷಣಗಳು ಕಾಣುತ್ತಿಲ್ಲ. ಈ ಎರಡು ಬಣಗಳ ಕಾದಾಟದ ಮಧ್ಯೆ ಉಳಿದಿದ್ದ ತಟಸ್ಥ ಬಣವನ್ನು ಉತ್ತೇಜಿಸುವ ಕೆಲಸ ಎರಡೂ ಬಣದಿಂದಲೂ ನಡೆಯುತ್ತಿದೆ.

ಒಂದು ಕಡೆ ಯತ್ನಾಳ ಬಣ ಕೇಂದ್ರ ಸಚಿವ ವಿ. ಸೋಮಣ್ಣ ಅವರನ್ನು ಸೆಳೆದು ಲಿಂಗಾಯತ ಕಾರ್ಡ್ ಉರುಳಿಸಲು ಸಿದ್ಧತೆ ನಡೆಸಿರುವ ಬೆನ್ನಲ್ಲೆ, ವಿಜಯೇಂದ್ರ ಸಹ ತಟಸ್ಥ ಬಣವನ್ನು ಟೀಕಿಸಿ, ಬಿ.ಎಸ್. ಯಡಿಯೂರಪ್ಪ ಅವರನ್ನು ಅವಮಾನಿಸಿದರೂ ಸುಮ್ಮನಿರುವ ಯಡಿಯೂರಪ್ಪ ಆಪ್ತರು ಎನಿಸಿಕೊಂಡವರ ಬಗ್ಗೆ ಕೆಂಡ ಕಾರಿದ್ದಾರೆ. ಈ ಮಧ್ಯೆ ಬಡಪಾಯಿ ಆರ್ .ಅಶೋಕ ದಿಕ್ಕು ತೋಚದೆ, ತೋಚಿದ್ದನ್ನು ಹೇಳುತ್ತಿರುವುದು ಬಿಜೆಪಿಯ ಜಗಳ ಬೀದಿಗೆ ಬಿದ್ದಿರುವುದಕ್ಕೆ ಸಾಕ್ಷಿಯಾಗಿದೆ.

ಕಳೆದ ಆರು ತಿಂಗಳಿಂದ ಎನ್ನುವುದಕ್ಕಿಂತ ವಿಜಯೇಂದ್ರ ಬಿಜೆಪಿ ರಾಜ್ಯಾಧ್ಯಕ್ಷರಾದ ನಂತರ ರಾಜ್ಯ ಬಿಜೆಪಿಯಲ್ಲಿ ಬಣ ಜಗಳ ಮೂಡಲು ಕಾರಣವಾಯಿತು. ಯಡಿಯೂರಪ್ಪ ಸಿಎಂ ಆಗಿದ್ದಾಗಲೂ ಅವರ ವಿರುದ್ಧ ಹರಿಹಾಯ್ದಿದ್ದ ಯತ್ನಾಳ, ಈಗಲೂ ಅದನ್ನ ಮುಂದುವರಿಸಿಕೊಂಡು ಹೊರಟಿದ್ದಾರೆ. ಆದರೂ ಬಿಜೆಪಿ ಹೈಕಮಾಂಡ್ ಅವರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಲು ಸಾಧ್ಯವಾಗುತ್ತಿಲ್ಲ. ಈಗ ಯತ್ನಾಳ ಬಣ ದೊಡ್ಡದಾಗಿದೆ. ಕ್ರಮ ಕೈಗೊಂಡರೆ ಬಿಜೆಪಿಗೆ ಹಾನಿಯಾಗುವಷ್ಟರ ಮಟ್ಟಿಗೆ ಪಕ್ಷಕ್ಕೆ ಹಿನ್ನಡೆ ಆಗಲಿದೆ.

ಬಿಜೆಪಿ ಬಣ ಜಗಳ ಏನೇ ಇರಲಿ. ಆದರೆ ರಾಜ್ಯದಲ್ಲಿ ಪ್ರತಿಪಕ್ಷವಾಗಿ ಬಿಜೆಪಿ ಸಂಪೂರ್ಣ ವಿಫಲವಾಗಿದೆ. ತನ್ನ ಆಂತರಿಕ ಸಂಘರ್ಷವನ್ನು ಶಮನ ಮಾಡಿಕೊಳ್ಳಲು ಸಾಧ್ಯವಾಗದೆ ಪರಿತಪಿಸುತ್ತಿದೆ. ಸಹಜವಾಗಿ ಪ್ರತಿಪಕ್ಷವಾಗಿ ಮಾಡಬೇಕಾದ ಎಲ್ಲ ಕೆಲಸಗಳಿಗೆ ಹಿನ್ನಡೆಯಾಗಿದೆ. ಮುಖ್ಯವಾಗಿ ಪ್ರತಿಪಕ್ಷ ನಾಯಕನಾಗಿ ಆರ್ .ಅಶೋಕ ವೈಫಲ್ಯ, ಪಕ್ಷದಲ್ಲಿ ಅವರಿಗಿರುವ ಸ್ಥಾನಮಾನ, ವರ್ಚಸ್ಸು ನೋಡಿದರೆ, ಕರ್ನಾಟಕದಲ್ಲಿ ಕಾಂಗ್ರೆಸ್ ಮತ್ತಷ್ಟು ಗಟ್ಟಿಯಾಗುವುದರಲ್ಲಿ ಅನುಮಾನವಿಲ್ಲ.

## ಸಂತ ಶ್ರೀ ಸೇವಾಲಾಲ್‌ರ ಭಕ್ತಿಗೀತೆ ಬಿಡುಗಡೆ




■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಶ್ರೀ ಶಂಕರ್ ನಾಯ್ಕ್ (ಕವಿರಾಜ್) ಇವರ ಸ್ವರಚಿತ ಸಂತ ಶ್ರೀ ಸೇವಾಲಾಲ್ ಅವರ 'ತಾರ ಮಾರ ಭೇದ ಕಾಯಿರಾ ಭಾಯಾ' ಭಕ್ತಿಗೀತೆ ಸಿ.ಕೆ. ಪ್ರೊಡಕ್ಷನ್ ಯುಟ್ಯೂಬ್ ಚಾನಲ್‌ನಲ್ಲಿ ಬಿಡುಗಡೆಯಾಗಿದೆ. ಗೀತೆಯು ಸ್ವತಃ ಕವಿರಾಜ್ ಅವರ ಕಂಠಸಿರಿಯಲ್ಲಿ ಮೂಡಿಬಂದಿದೆ. ಉತ್ತಮ ಸಾಹಿತ್ಯ ಮತ್ತು ಗಾಯನ ಮಾಡಿರುವ ಶಂಕರ್ ನಾಯ್ಕ್ ಇವರ ಗೀತೆಗೆ ಖ್ಯಾತ ಬಂಜಾರ ಗಾಯಕರಾದ ಶ್ರೀಕುಬೇರ ನಾಯ್ಕ್ ಸಂಗೀತ ನಿರ್ದೇಶನ ಮಾಡಿದ್ದಾರೆ. ಪತ್ರಿಕಾ ಸಂಪರ್ಕ ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ ಅವರದಿದೆ. ಬಹುನಿರೀಕ್ಷಿತ ಕವಿರಾಜ್ ಇವರ ಅಭಿಮಾನಿಗಳು ಈ ಭಕ್ತಿ ಗೀತೆಯನ್ನು ಕೇಳಿ ಪ್ರೋತ್ಸಾಹ ನೀಡುವಂತೆ ಕವಿರಾಜ್ ವಿನಂತಿಸಿದ್ದಾರೆ.

## ಒನ್ ಕೇಂದ್ರಕ್ಕೆ ಆನ್‌ಲೈನ್ ನಲ್ಲಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಮುಂಡರಗಿ ತಾಲೂಕಿನಲ್ಲಿ ಖಾಲಿ ಇರುವ ಶಿವಾಜಿನಗರ ಗ್ರಾಮ ಪಂಚಾಯತಿಯ ಗ್ರಾಮ ಒನ್ ಕೇಂದ್ರಕ್ಕೆ ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ದಿನಾಂಕ: 15-02-2025 ರೊಳಗಾಗಿ ಅರ್ಜಿಗಳನ್ನು https://www.karnatakaone.gov.in/Public/GramOneFranchiseeTerms ನಲ್ಲಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಗಳು, ಗದಗ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯೋಗಾಸನ ಚಾಂಪಿಯನ್‌ಶಿಪ್ ಸ್ಪರ್ಧೆಗೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಯೋಗ ಫೆಡರೇಶನ್ ಆಫ್ ಇಂಡಿಯಾ ಪಂಚಕುಲ (ಹರ್ಯಾಣ) ಇವರು ಯೋಗ ಅಸೋಸಿಯೇಶನ್ ಆಫ್ ಕೇರಳ ಸಂಸ್ಥೆಯ ಸಹಯೋಗದಲ್ಲಿ ಫೆ.13ರಿಂದ 16ರವರೆಗೆ ಇಂಟರ್‌ನ್ಯಾಷನಲ್ ಅಕ್ವಿಟಿಕ್ ಕಾಂಪ್ಲೆಕ್ಸ್ ಪಿರಪಂಕೋಟ, ತಿರುವನಂತಪುರಂ (ಕೇರಳ) ದಲ್ಲಿ ನಡೆಸಲಿರುವ 49ನೇ ಹಿರಿಯರ ರಾಷ್ಟ್ರೀಯ ಯೋಗಾಸನ ಚಾಂಪಿಯನ್‌ಶಿಪ್ ಸ್ಪರ್ಧೆಗಳಲ್ಲಿ ಕರ್ನಾಟಕ ರಾಜ್ಯ ತಂಡದಿಂದ ಭಾಗವಹಿಸಲು ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ವಿದ್ಯಾರ್ಥಿ ಯಶವಂತ ಮತ್ತೂ (45 ವರ್ಷ ಮೇಲ್ಪಟ್ಟ ಪುರುಷರ ವಿಭಾಗ) ಬಸವ ಯೋಗ ಮಹಾವಿದ್ಯಾಲಯದ ವಿದ್ಯಾರ್ಥಿನಿ ಗೀತಾ ಗೋಡಿ (ಪೂಜಾರ) (45 ವರ್ಷ ಮೇಲ್ಪಟ್ಟ ಮಹಿಳೆಯರ ವಿಭಾಗ) ಮತ್ತು ಕೆ.ಎಸ್. ಪಲ್ಲೇದ (30 ವರ್ಷ ಮೇಲ್ಪಟ್ಟ ಪ್ರೊಫೆಶನಲ್ (ರೆಫ್ರಿ) ವಿಭಾಗಗಳಿಗೆ ಆಯ್ಕೆಯಾಗಿದ್ದಾರೆ.

ಸ್ಪರ್ಧೆಗೆ ಆಯ್ಕೆಯಾಗಿರುವ ಗೀತಾ ಗೋಡಿ ಮತ್ತು ಕೆ.ಎಸ್. ಪಲ್ಲೇದ ಈರ್ವರಿಗೂ ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಶನ್ ಗದಗ ಸಂಸ್ಥೆಯ ಅಧ್ಯಕ್ಷರು ಹಾಗೂ ಪದಾಧಿಕಾರಿಗಳ ಪರವಾಗಿ ಕಾರ್ಯದರ್ಶಿ ಚೇತನ ಚುಂಚಾ ಮತ್ತು ಯೋಗ ಪಾಠಶಾಲೆಯ ಆಡಳಿತ ಮಂಡಳಿ ಪರವಾಗಿ ಎಂ.ಎಸ್. ಅಂಗಡಿ, ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಸಿಬ್ಬಂದಿ ವರ್ಗ, ಆಡಳಿತ ಮಂಡಳಿಯ ಪರವಾಗಿ ಪ್ರೊ. ಎಸ್.ಎಸ್. ಪಟ್ಟಣಶೆಟ್ರ, ಹಳೆಯ ವಿದ್ಯಾರ್ಥಿ ಸಂಘದ ಪರವಾಗಿ ಐ.ಬಿ. ಕೊಟ್ಟೂರಶೆಟ್ಟಿ, ಎಂ.ಎಸ್. ಶಿರಿಯಣ್ಣವರ, ಡಾ. ಎಂ.ವ್ಹಿ. ಐಹೊಳ್ಳಿ ಮುಂತಾದವರು ಶುಭ ಹಾರೈಸಿದ್ದಾರೆ.

---

**ಚಿಕೇನಕೊಪ್ಪ ಚನ್ನವೀರಶರಣರ ಪುಣ್ಯಸ್ಮರಣೋತ್ಸವ । ಧಾರ್ಮಿಕ ಚಿಂತನಗೋಷ್ಠಿಯಲ್ಲಿ ಅಭಿನವ ಗವಿಸಿದ್ದೇಶ್ವರ ಶ್ರೀಗಳು**

# ಕಳೆದು ಹೋದುದರ ಬಗ್ಗೆ ಚಿಂತಿಸದಿರಿ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಚನ್ನವೀರಶರಣರ ಮಠದಲ್ಲಿ ಶರಣರ 30ನೇ ಜಾತ್ರಾ ಮಹೋತ್ಸವ ಪುಣ್ಯಸ್ಮರಣೋತ್ಸವದ ಅಂಗವಾಗಿ ಧರ್ಮಚಿಂತನಗೋಷ್ಠಿ ಜರುಗಿತು.

ಸನ್ನಿಧಾನ ವಹಿಸಿದ ಕೊಪ್ಪಳ ಗವಿಮಠದ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಮುರಿದ ಮೂಳೆಗಳನ್ನು ಕೂಡಿಸುವವರು ಬಹಳ ಜನರಿದ್ದಾರೆ. ಆದರೆ, ಮುರಿದ ಮನಸ್ಸುಗಳನ್ನು ಕಟ್ಟುವ ಕಾರ್ಯವನ್ನು ಧರ್ಮಚಿಂತನ ಗೋಷ್ಠಿ ಮಾಡುವುದು. ದಾರ್ಶನಿಕರು, ಋಷಿಗಳು ಸಂಶೋಧನೆಯಲ್ಲಿ ಜಾಣನಾರು, ದಡ್ಡನಾರು, ಎಂಬ ಚಿಂತನೆ ಮಾಡುತ್ತ ಬಂದಿದ್ದಾರೆ. ಜಾಣ ಮತ್ತು ದಡ್ಡನಾಗುವುದು ಹೊರಗಿನಿಂದ ಬರುವುದಲ್ಲ, ಯಾರು ತಮ್ಮ ಜೀವನದಲ್ಲಿ ಹಿಂದೆ ನಡೆದ ಕಹಿ ಘಟನೆಗಳನ್ನು ಮರೆತು ಮುಂದೆ ಆಗುವುದರ ಬಗ್ಗೆ ಭಯ ಪಡುವುದಿಲ್ಲವೋ ಅವರು ಜಾಣರು, ಮುತ್ಸದ್ದಿಗಳು ಎನ್ನಬಹುದು ಎಂದರು.

ದೇಹ ಮಾತ್ರ ವರ್ತಮಾನದಲ್ಲಿರುತ್ತದೆ. ಮನಸ್ಸು ಭೂತ, ಮತ್ತು ಭವಿಷ್ಯತ್ತಿನಲ್ಲಿ ವಿನಾಕಾರಣ ಚಿಂತಿಸುತ್ತ ಬದುಕುತ್ತದೆ. ಮನಸ್ಸಿನಲ್ಲಿ ವಿಷ ತುಂಬಿಕೊಂಡು ಜೀವನದಲ್ಲಿ ಘಟಿಸಿದ ಕಹಿ ಘಟನೆಯನ್ನು ತಲೆಯಲ್ಲಿಟ್ಟುಕೊಳ್ಳಬಾರದು. ಒಮ್ಮೆ ನಿಂದನೆ, ಅಪಮಾನ, ಸಾವು, ನೋವು, ಬರುವುದು ಸಹಜ. ಕಳೆದು ಹೋದುದರ ಬಗ್ಗೆ ಚಿಂತಿಸಬಾರದು. ಸತ್ತ ನಿನ್ನೆಗಾಗಿ, ಬರಲಿರುವ ನಾಳೆಗಾಗಿ ಭಯಪಡುವುದಕ್ಕಿಂತ ಇಂದಿನ ಸುಂದರ ಕ್ಷಣವನ್ನು ಅನುಭವಿಸುವುದೇ ಜೀವನದ ಯಶಸ್ಸಿನ ಕೌಶಲ್ಯವಾಗಿದೆ.




ಕಾಯಕ ಮಾಡುವುದನ್ನು ರೂಢಿಸಿಕೊಂಡು ಪುಣ್ಯಕಾರ್ಯಗಳನ್ನು ಮಾಡಿದಾಗ ಪುನಃ ಫಲಶೃತಿ ಪುಣ್ಯದ ಬುತ್ತಿಯಾಗಿಯೇ ಮರಳಿ ನಿಸರ್ಗ ನೀಡುವುದು. ಮನುಷ್ಯ ನೆಲದ ಕಾನೂನಿಂದ ತಪ್ಪಿಸಿಕೊಳ್ಳಬಹುದು. ಆದರೆ ನಿಸರ್ಗದ ಕಾನೂನಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ನಿಸರ್ಗ ಪ್ರಾಣಿ ಮತ್ತು ಮನುಷ್ಯನಲ್ಲಿ ಕಣ್ಣು, ಮೂಗು, ಕಿವಿ, ಇಲ್ಲದವರನ್ನು ಸೃಷ್ಟಿಸಿದೆ. ಆದರೆ ಹೊಟ್ಟೆ ಇಲ್ಲದವರನ್ನು ಸೃಷ್ಟಿಸಿಲ್ಲ. ಎಲ್ಲರಿಗೂ ಹೊಟ್ಟೆ ಇದೆ. ಅಂದರೆ ಎಲ್ಲರೂ ದುಡಿದೇ ಉಣ್ಣಬೇಕು ಎಂಬುದು ಸೃಷ್ಟಿಯ ನಿಯಮವಾಗಿದೆ. ಕಾರಣ, ಪುಣ್ಯಕರ್ಮಗಳನ್ನು ಮಾಡಿ ಪುಣ್ಯದ ಫಲ ಹೆಚ್ಚಿಸಿಕೊಳ್ಳಬೇಕೆಂದರು.

ತಿಕೋಟಾ ವಿರಕ್ತಮಠದ ಮ.ನಿ.ಪ್ರ. ಚನ್ನಮಲ್ಲಿಕಾರ್ಜುನ ಮಹಾಸ್ವಾಮಿಗಳು ಉಪದೇಶಾಮೃತ ನೀಡಿ, ಮನುಷ್ಯ ಜ್ಞಾನ ಮತ್ತು ಅನ್ನಕ್ಕಾಗಿ ಬದುಕುತ್ತಿದ್ದಾನೆ. ಜ್ಞಾನವನ್ನು ಸಂಪಾದಿಸಿ ಧರ್ಮ ಮಾರ್ಗದಲ್ಲಿ ನಡೆದಾಗ ಉತ್ತಮ ನಡತೆಯುಳ್ಳವನಾಗುತ್ತಾನೆ. ಅತಿಯಾದ ದುರಾಸೆಯನ್ನು ಹೊಂದಿ ಜೀವನವನ್ನು ಹಾಳು ಮಾಡಿಕೊಳ್ಳುತ್ತಿರುವುದು ವಿಷಾದನೀಯ ಎಂದರು.

ಸಮ್ಮುಖ ವಹಿಸಿದ ಹೊಸಳ್ಳಿಯ ಬೂದೀಶ್ವರ ಮಠದ ಮ.ನಿ.ಪ್ರ. ಬೂದೀಶ್ವರ ಮಹಾಸ್ವಾಮಿಗಳು ಮಾತನಾಡಿ ಹುಟ್ಟು ಸಾವುಗಳ ಮಧ್ಯೆ ಬದುಕೆಂಬುದು ಅನಿಶ್ಚಿತವಾಗಿದೆ. ಆದರೆ ಜ್ಞಾನವನ್ನು ಪಡೆದು ಬರಲಿರುವ ಬದುಕನ್ನು ಕರಗತ ಮಾಡಿಕೊಂಡವನು ಜ್ಞಾನಿಯಾಗುತ್ತಾನೆ. ಬದುಕಿನಲ್ಲಿ ಯಶಸ್ಸು ಹೊಂದುತ್ತಾನೆ ಎಂದು ತಿಳಿಸಿ ಅಂತಹ ಚಿಂತನೆ ಮಾಡುವುದು ಉತ್ತಮ ಬೆಳವಣಿಗೆ ಎಂದರು.

ಖಜ್ಜಿಡೋಣಿಯ ಶ್ರೀ ಕೃಷ್ಣಾನಂದ ಶಾಸ್ತ್ರಿಗಳು ಉಪದೇಶಾಮೃತ ನೀಡಿದರು. ಹೆಬ್ಬಾಳ ಬೃಹನ್ಮಠದ ಷ.ಬ್ರ. ನಾಗಭೂಷಣ ಶಿವಾಚಾರ್ಯ ಮಹಾಸ್ವಾಮಿಗಳು,

> ಶ್ರೀ ಶಿವಶಾಂತವೀರಶರಣರು ಮಾತನಾಡಿ, ಜಾತ್ರೆಯ ಉದ್ದೇಶ ಮನುಕುಲಕ್ಕೆ ಆಧ್ಯಾತ್ಮವನ್ನು, ಜ್ಞಾನದ ಅನುಭವದ ಮಾತುಗಳನ್ನು, ಶರಣರು ನಡೆದು ಹೋದ ದಾರಿಯನ್ನು ಭಕ್ತ ಸಂಕುಲಕ್ಕೆ ತಿಳಿಸುವುದು, ನಮ್ಮ ಭವ್ಯ ಪರಂಪರೆ, ಸಂಸ್ಕೃತಿ, ಪರಿಚಯಿಸುವುದು ಉಳಿಸಿ ಬೆಳೆಸುವುದು ಆಗಿದೆ. ಗುರು ನೀಡುವ ಪ್ರೇಮ ಪರಮ ಪ್ರೇಮ. ಅದು ನಮಗೆ ಸುಖ ನೀಡುತ್ತದೆ ಮತ್ತು ಶಾಶ್ವತವಾಗಿರುತ್ತದೆ ಎಂದರು.

ಮಹಾರಾಷ್ಟ್ರದ ಅಣದೂರಿನ ನೀಲಕಂಠೇಶ್ವರ ಮಠದ ಷ.ಬ್ರ.ಶಿವಯೋಗಿ ಶಿವಾಚಾರ್ಯ ಮಹಾಸ್ವಾಮಿಗಳು, ಸುಕ್ಷೇತ್ರ ಗುಡದೂರಿನ ನೀಲಕಂಠತಾತನವರು, ಮಂಗಳೂರಿನ ಷ.ಬ್ರ. ಸಿದ್ದಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಸಮ್ಮುಖ ವಹಿಸಿದ್ದರು.

ಶಾಸಕ ಜಿ.ಎಸ್. ಪಾಟೀಲ, ಮಾಜಿ ಸಚಿವ ಬಿ.ಆರ್. ಯಾವಗಲ್ಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಕೆ.ಸಿ.ಸಿ. ಬ್ಯಾಂಕ್ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಉಪಾಧ್ಯಕ್ಷ ಪೀರಸಾಬ ಕೌತಾಳ, ಯುವ ಧುರೀಣ ಉಮೇಶಗೌಡ ಪಾಟೀಲ ಉಪಸ್ಥಿತರಿದ್ದರು.

ಗದುಗಿನ ದಿಯಾ ಪೀರಸಾಬ ಕೌತಾಳ ಹಾಗೂ ತಂಡದವರಿಂದ ಸಂಗೀತ ಸೇವೆ ಜರುಗಿತು. ಶಿವಲಿಂಗಶಾಸ್ತ್ರಿ ಸಿದ್ಧಾಪೂರ ಸ್ವಾಗತಿಸಿದರು. ಬೆಂಗಳೂರು ಆಕಾಶವಾಣಿ ನಿರೂಪಕಿ ಸವಿತಾ ಶಿವಕುಮಾರ ನಿರೂಪಿಸಿದರು. ಶಿವಶರಣೆಗೌಡ ಯರಡೋಣಿ ವಂದಿಸಿದರು.

---

**ಮಾಧ್ಯಮ ಅಕಾಡೆಮಿಯಿಂದ ಪ್ರಥಮ ಛಾಯಾಚಿತ್ರ ಸ್ಪರ್ಧೆ-ಪ್ರದರ್ಶನ**

# ರಾಜ್ಯಮಟ್ಟದ ಛಾಯಾಚಿತ್ರ ಸ್ಪರ್ಧೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಮಾಧ್ಯಮ ಅಕಾಡೆಮಿಯು ರಾಜ್ಯದಲ್ಲಿ ಮೊದಲ ಬಾರಿಗೆ ಕರ್ನಾಟಕದ ಸುದ್ದಿ ಛಾಯಾಚಿತ್ರಗ್ರಾಹಕರಿಗಾಗಿ ರಾಜ್ಯಮಟ್ಟದ ಛಾಯಾಚಿತ್ರ ಸ್ಪರ್ಧೆ ಹಾಗೂ ಪ್ರದರ್ಶನವನ್ನು ಏರ್ಪಡಿಸಿದೆ.


ಈ ಸ್ಪರ್ಧೆಯಲ್ಲಿ ಆಯ್ಕೆಯಾಗುವ ಮೊದಲ ಮೂರು ಛಾಯಾಚಿತ್ರಗಳಿಗೆ ಕ್ರಮವಾಗಿ 35,000/- ರೂ., 25,000/- ರೂ. ಹಾಗೂ 15,000/- ರೂ. ನಗದು ಬಹುಮಾನ ನೀಡಲಾಗುವುದು. ಆಯ್ದ ಅತ್ಯುತ್ತಮ ಛಾಯಾಚಿತ್ರಗಳನ್ನು ಹುಬ್ಬಳ್ಳಿ-ಧಾರವಾಡದಲ್ಲಿ ಮಾರ್ಚ್ ತಿಂಗಳಲ್ಲಿ ಅಕಾಡೆಮಿ ವತಿಯಿಂದ ಏರ್ಪಡಿಸಲಾಗುವ ಸುದ್ದಿ ಛಾಯಾಗ್ರಹಣ ಕುರಿತ ಕಾರ್ಯಾಗಾರದ ಸಂದರ್ಭದಲ್ಲಿ ಛಾಯಾಚಿತ್ರ ಪ್ರದರ್ಶನದಲ್ಲಿ ಇರಿಸಲಾಗುವುದು.

ಸ್ಪರ್ಧೆಯ ಷರತ್ತುಗಳು:

* ಈ ಸ್ಪರ್ಧೆಗೆ ಪ್ರವೇಶ ಉಚಿತವಾಗಿದ್ದು, ದಿನಾಂಕ :01-01-.202 4 ರಿಂದ 31-01-2025ರ ಅವಧಿಯಲ್ಲಿ ಚಿತ್ರಿಸಿರುವ ಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಸ್ವೀಕರಿಸಲಾಗುವುದು. ಪ್ರತಿ ಸುದ್ದಿ ಛಾಯಾಚಿತ್ರಗ್ರಾಹಕರು ತಾವೇ ಚಿತ್ರಿಸಿರುವ ಎರಡು ಸುದ್ದಿ ಛಾಯಾಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಸಲ್ಲಿಸಬಹುದು.

* ಸುದ್ದಿ ಛಾಯಾಚಿತ್ರಗಳನ್ನು ಚಿತ್ರಿಸಿರುವುದಕ್ಕೆ ಯಾವುದೇ ಭೌಗೋಳಿಕ ಪರಿಮಿತಿ ಇರುವುದಿಲ್ಲ.

* ಛಾಯಾಚಿತ್ರಗಳ ಮೇಲೆ ಹೆಸರು, ಶೀರ್ಷಿಕೆ ಹಾಗೂ ವಾಟರ್ ಮಾರ್ಕ್‌ಗಳು ಇರಬಾರದು.



* ಸ್ಪರ್ಧೆಗೆ ಕಳಿಸುವ ಛಾಯಾಚಿತ್ರಗಳ ಅಂದರೆ ಡಿಜಿಟಲ್ ಇಮೇಜ್ ಗಳನ್ನುಎಕಇಲು ಜಿಂಡಿಟಚಿಣ ನಲ್ಲಿ ಮಾತ್ರ ಸಲ್ಲಿಸಬೇಕು.

* ಪ್ರದರ್ಶನಕ್ಕೆ ಆಯ್ಕೆಯಾಗುವ ಛಾಯಾಚಿತ್ರಗಳನ್ನು 20" ಥ 30" ಅಳತೆಯಲ್ಲಿಮುದ್ರಣ ಮಾಡಿಸಬೇಕಾಗಿರುವುದರಿಂದ ಕಳಿಸುವ ಇಮೇಜ್ ಗಳು 20"ಥ 30" ಅಳತೆಯ ,300 ಆಕಖ ನಲ್ಲಿದ್ದು ಕನಿಷ್ಠ 5ಒಃ ಗಾತ್ರದಲ್ಲಿರಬೇಕು.

* ಮೊಬೈಲ್ ಕ್ಯಾಮೆರಾದಲ್ಲಿ ಚಿತ್ರಿಸಿರುವ ಚಿತ್ರಗಳನ್ನು ಸ್ಪರ್ಧೆಗೆ ಸ್ವೀಕರಿಸಲಾಗುವುದಿಲ್ಲ.

* ಸ್ಪರ್ಧೆಯಲ್ಲಿ ಭಾಗವಹಿಸುವ ಸುದ್ದಿಛಾಯಾಚಿತ್ರಗಳು ಸಹಜವಾಗಿರಬೇಕು. ಚಿತ್ರದಲ್ಲಿನ ಯಾವುದೇ ಭಾಗವನ್ನು ತೆಗೆಯುವುದಾಗಲಿ ಅಥವಾ ಸೇರಿಸುವುದಾಗಲಿ ಮಾಡಿರಬಾರದು.

* ಸ್ಪರ್ಧೆಯಲ್ಲಿ ಭಾಗವಹಿಸುವ ಪ್ರತಿಯೊಬ್ಬ ಛಾಯಾಗ್ರಾಹಕರು mediaacademy.karnataka.gov.in ವೆಬ್ಸೈಟ್ನಲ್ಲಿಇರುವ ನಿಗದಿತ ಅರ್ಜಿಯನ್ನುಆಂತಿಟ ಟಂಚಿಜ ಮಾಡಿಕೊಂಡು ಭರ್ತಿಮಾಡಿ, ತಮ್ಮ ಪಾಸ್ಪೋರ್ಟ್ ಅಳತೆಯ ಭಾವಚಿತ್ರದೊಂದಿಗೆ ಇಮೇಜ್ಗಳನ್ನು photo.karnatakamediaacademy@gmail.com ಇ-ಮೇಲ್ ವಿಳಾಸಕ್ಕೆ ದಿನಾಂಕ: 15-02-2025 ರಂದು ಸಂಜೆ 5:00ಗಂಟೆ ಒಳಗಾಗಿ ಸಲ್ಲಿಸತಕ್ಕದ್ದು. ನಂತರ ಬಂದ ಚಿತ್ರಗಳನ್ನು ಸ್ಪರ್ಧೆಗೆ ಪರಿಗಣಿಸಲಾಗುವುದಿಲ್ಲ.

> ಪ್ರತಿ ಸ್ಪರ್ಧಿಯೂ ಅವರು ಸುದ್ದಿ ಛಾಯಾಚಿತ್ರಗ್ರಾಹಕರಾಗಿ ಕಾರ್ಯನಿರ್ವಹಿಸುತ್ತಿರುವ ಪತ್ರಿಕೆಯ ಸಂಪಾದಕರಿಂದ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ದೃಢೀಕರಣ ಪತ್ರ ಅಥವಾ ಕರ್ನಾಟಕ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪತ್ರಕರ್ತರಿಗಾಗಿ ನೀಡುವ Accreditation ಅಚಿಡಿಜ ಹೊಂದಿರುವವರು ಅದರ ದೃಢೀಕೃತ ಪ್ರತಿಯನ್ನು ಕಡ್ಡಾಯವಾಗಿ ಅರ್ಜಿಯೊಂದಿಗೆ ಲಗತ್ತಿಸಬೇಕು.

* ಸ್ಪರ್ಧೆಗೆ ಬಂದಿರುವ ಛಾಯಾಚಿತ್ರಗಳನ್ನು ಪ್ರಶಸ್ತಿಗೆ ಹಾಗೂ ಪ್ರದರ್ಶನಕ್ಕೆ ಆಯ್ಕೆಮಾಡಲು ಸುದ್ದಿ ಛಾಯಾಗ್ರಹಣ ಕ್ಷೇತ್ರದಲ್ಲಿ ಅನುಭವ ಹೊಂದಿರುವ ಮೂವರು ತೀರ್ಪುಗಾರರಿದ್ದು, ಅವರು ತೆಗೆದುಕೊಂಡ ತೀರ್ಮಾನವೇ ಅಂತಿಮವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ-9448227768 ಹಾಗೂ 9449245980ನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

---

**ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಮುಪ್ಪಿನ ಬಸವಲಿಂಗ ಶ್ರೀಗಳು**

# ಎಲ್ಲವನ್ನೂ ತಿಳಿದವರು ಪ್ರಪಂಚದಲ್ಲಿ ಬಹಳಷ್ಟಿಲ್ಲ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಈ ಜಗತ್ತಿನ ಗೂಢವನ್ನು ಅರ್ಥ ಮಾಡಿಕೊಳ್ಳಲು ಮನುಷ್ಯನಿಗೆ ಇನ್ನೂ ಸಾಧ್ಯವಾಗಿಲ್ಲ. ಎಂದಿಗೆ ಸಾಧ್ಯವಾಗುತ್ತದೆಯೋ ಅದೂ ಗೊತ್ತಿಲ್ಲ. ಆದರೂ ನಾವು ನನಗೆಲ್ಲ ಗೊತ್ತು, ನಾನು ಬಹಳಷ್ಟನ್ನು ತಿಳಿದುಕೊಂಡಿದ್ದೇನೆ ಎಂದು ಹಾರಾಡುತ್ತೇವೆ. ಈ ಜಗತ್ತಿನಲ್ಲಿ ಎಲ್ಲವನ್ನೂ ತಿಳಿದವರು ಬಹಳಷ್ಟಿಲ್ಲ ಎಂದು ಹಾಲಕರೆಯ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ ಹೇಳಿದರು. ಕೋಡಿಕೊಪ್ಪದ ಶ್ರೀ ವೀರಪ್ಪಜ್ಜನವರ ಪುಣ್ಯಾರಾಧನೆ ಶತಮಾನೋತ್ಸವದ ದಿವ್ಯ ಸಾನ್ನಿಧ್ಯವನ್ನು ವಹಿಸಿ ಅವರು ಆಶೀರ್ವಚನ ನೀಡಿದರು. ಮಠಕ್ಕೆ ಬರುವಾಗ ನಾವು ನಮ್ಮ ಪ್ರಾಪಂಚಿಕ ವ್ಯವಹಾರಗಳನ್ನು ಮನೆಯಲ್ಲಿಯೇ ಬಿಟ್ಟು ಬರಬೇಕು. ಧ್ಯಾನಾಸಕ್ತರಾಗಿ ಕುಳಿತು ಭಗವಂತನ ಸ್ಮರಣೆ ಮಾಡಬೇಕು. ಅದರಲ್ಲೂ ವೀರಪ್ಪಜ್ಜನವರಂತಹ ಹಠಯೋಗಿಯ ಮಠಕ್ಕೆ ಬಂದಾಗ ನಮ್ಮ ಮೈ-ಮನಸ್ಸುಗಳೆರಡೂ ಅಜ್ಜನವರ ಕಡೆ ಕೇಂದ್ರೀಕೃತವಾಗಿರಬೇಕು. ಲೌಕಿಕದ ಭವಬಂಧನಗಳನ್ನು ಮೀರಿದಾಗ ಮಾತ್ರ




ನಾವು ಆಧ್ಯಾತ್ಮದಲ್ಲಿ ಏನಾದರೂ ಸಾಧಿಸಲು ಸಾಧ್ಯ. ವೀರಪ್ಪಜ್ಜನವರು ಲಿಂಗೈಕ್ಯರಾಗಿ ನೂರು ವರ್ಷಗಳು ಸಂದ ಹಿನ್ನೆಲೆಯಲ್ಲಿ ಈ ಅದ್ದೂರಿ ಸಮಾರಂಭವನ್ನು ಏರ್ಪಡಿಸಿದ್ದು ಸ್ತುತ್ಯ ಕಾರ್ಯ ಎಂದು ಶ್ರೀಗಳು ತಿಳಿಸಿದರು.

ಸಾನ್ನಿಧ್ಯ ವಹಿಸಿದ್ದ ಭೈರನಹಟ್ಟಿಯ ಶಾಂತಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ, ಬಾಲ್ಯದ ದಿನಗಳಿಂದಲೂ ತಮಗೂ ವೀರಪ್ಪಜ್ಜನವರ ಮಠಕ್ಕೂ ಇರುವ ಅವಿನಾಭಾವ ಸಂಬಂಧವನ್ನು ನೆನೆಸಿಕೊಂಡರು. ವೀರಪ್ಪಜ್ಜನವರಂತಹ ಮಹಾಮಹಿಮ ಈ ಕ್ಷೇತ್ರದಲ್ಲಿ ಅಭೂತಪೂರ್ವವಾದ ಸಾಧನೆಯನ್ನೇ ಮಾಡಿದ್ದಾನೆ ಎಂದರು.

ಅಬ್ಬಿಗೇರಿಯ ಶ್ರೀ ವೀರಭದ್ರ ಶಿವಾಚಾರ್ಯರು ಆಶೀರ್ವಚನ ನೀಡಿ, ಅಜ್ಜನವರ ಜಾತ್ರೆಯ ಸೊಗಸನ್ನು ಸವಿದವರಿಗಷ್ಟೇ ಅಜ್ಜನವರ ಲೀಲಾ ಮಹಿಮೆ ಎಂತಹುದು ಎಂಬುದು ಗೊತ್ತು. ಅಜ್ಜನ ಆಶೀರ್ವಾದ ದೊರೆತರೆ ಜೀವನದಲ್ಲಿ ಉನ್ನತಿ ಸಾಧ್ಯ ಎಂದರು. ಸಮಾರಂಭವನ್ನುದ್ದೇಶಿಸಿ ಚಂದನ ಶಾಲೆಯ ಅಧ್ಯಕ್ಷ ಟಿ. ಈಶ್ವರ ಮಾತನಾಡಿದರು. ವೇದಿಕೆಯ ಮೇಲೆ ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಟ್ರಸ್ಟ್ ಕಮಿಟಿ ಅಧ್ಯಕ್ಷ ಡಾ. ಎಂ.ಸಿ. ಚಪ್ಪನ್ನಮಠ, ಡಾ. ಕೆ.ಬಿ. ಧನ್ನೂರ ಉಪಸ್ಥಿತರಿದ್ದರು. ಡಾ. ವಿಶ್ವನಾಥ ಸ್ವಾಮೀಜಿ ಶ್ರೀ ವೀರಪ್ಪಜ್ಜನವರ ಅನೇಕ ಲೀಲೆಗಳನ್ನು ಜೀವನ ದರ್ಶನ ಪ್ರವಚನದಲ್ಲಿ ಹೇಳಿದರು. ಗಾಯಕಿ ರಾಜಶ್ರೀ ಕುಲಕರ್ಣಿ ಪ್ರಾರ್ಥಿಸಿದರು. ಶಿವನಗೌಡ ಪಾಟೀಲ ಸ್ವಾಗತಿಸಿದರು. ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ ನಿರೂಪಿಸಿದರು.

> ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಶ್ರೀ ವೀರಪ್ಪಜ್ಜನವರ ಬಗ್ಗೆ ಇನ್ನೂ ಸಂಶೋಧನೆ ನಡೆಯಬೇಕು. ಇನ್ನೂ ಹೆಚ್ಚಿನ ಮಾಹಿತಿಯನ್ನು ನೀಡಲು ಸಂಶೋಧಕರು ಮುಂದಾಗಬೇಕು. ಶ್ರೀ ವೀರಪ್ಪಜ್ಜನವರನ್ನು ಇನ್ನಷ್ಟು ತಿಳಿಯಲು ಇಲ್ಲೊಂದು ಸಂಶೋಧನಾ ಕೇಂದ್ರವಾಗಬೇಕು ಎಂಬ ಸಚಿವ ಎಚ್.ಕೆ. ಪಾಟೀಲ ಮತ್ತು ಟಿ. ಈಶ್ವರ ಮಾತುಗಳನ್ನು ತಾವೂ ಸಹ ಅನುಮೋದಿಸುವದಾಗಿ ಹೇಳಿದ ಪಾಟೀಲರು, ಈ ಪುಣ್ಯಾರಾಧನೆಯ ಶತಮಾನೋತ್ಸವದಲ್ಲಿ ಪಾಲ್ಗೊಂಡ ನಾವುಗಳೆಲ್ಲರೂ ಪುಣ್ಯವಂತರು ಎಂದರು.

# ಯುವ ಘಟಕದ ಗದಗ ತಾಲೂಕು ಅಧ್ಯಕ್ಷರ ನೇಮಕ



■ ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ಗದಗ ತಾಲೂಕು ಯುವ ಘಟಕದ ತಾಲೂಕ ಅಧ್ಯಕ್ಷರನ್ನಾಗಿ ಡಿಪ್ಲೋಮಾ ಪದವೀಧರರಾದ ಯೂನಸ್ ಮುಲ್ಲಾ (ದರವೇಶ) ಇವರನ್ನು ರಾಜ್ಯಾಧ್ಯಕ್ಷರಾದ ಮಹ್ಮದಶಫಿವುದ್ದೀನ ಎಸ್ ನಾಗರಕಟ್ಟಿ ಅವರ ಆದೇಶದ ಮೇರೆಗೆ ಗದಗ ಜಿಲ್ಲಾ ಯುವ ಘಟಕದ ಅಧ್ಯಕ್ಷರಾದ ಯಾಸಿನ್ ಮುಲ್ಲಾ ಇವರು ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ತಾಲೂಕಿನಲ್ಲಿರುವಂತಹ ಮುಸ್ಲಿಂ ಸಮುದಾಯದ ಯುವಕರನ್ನು ಸಂಘಟಿಸಿ, ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಮತ್ತು ರಾಜಕೀಯವಾಗಿ ಸಮಾಜದ ಮುಖ್ಯವಾಹಿನಿಗೆ ತರುವಲ್ಲಿ ಯೂನಸ್ ಶ್ರಮ ವಹಿಸಬೇಕೆಂದು ಆದೇಶಿಸಿದ್ದಾರೆ. ಮುಂಬರುವ ದಿನಮಾನದಲ್ಲಿ ಮುಸ್ಲಿಂ ಸಮುದಾಯದ ಯುವಕರ ಭವಿಷ್ಯವು ಉಜ್ವಲವಾಗುವಲ್ಲಿ ಮತ್ತು ದೇಶದ ಪ್ರಗತಿಯಲ್ಲಿ ಪ್ರಮುಖ ಪಾತ್ರ ವಹಿಸುವಂತೆ ಮಾಡಲು ತಾವು ಕಾರ್ಯಪ್ರವೃತ್ತಿ ಆಗಬೇಕೆಂದು ಆಶಿಸಿದ್ದಾರೆ .

# ಬಿಜೆಪಿ ನಗರ ಮಂಡಲ ಅಧ್ಯಕ್ಷರ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ವಿಧಾನಸಭಾ ಕ್ಷೇತ್ರದ ಗದಗ ನಗರ ಮಂಡಲದ ನೂತನ ಅಧ್ಯಕ್ಷರಾಗಿ ಗದಗ ನಗರದ ಪಕ್ಷದ ಸಾಮಾನ್ಯ ಕಾರ್ಯಕರ್ತ ಸುರೇಶ ಯಲ್ಲಪ್ಪ ಮರಳಪ್ಪನವರ ಅವರನ್ನು ಪಕ್ಷದ ಹಿರಿಯರು ಮತ್ತು ಗದಗ ನಗರ ಮಂಡಲ ಕೋರ್ ಕಮಿಟಿ ನೇತೃತ್ವದಲ್ಲಿ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವ್ಹಿ. ಸಂಕನೂರ, ಚುನಾವಣಾಧಿಕಾರಿ ಶಶಿಮೌಳಿ ಕುಲಕರ್ಣಿ, ಸಹ ಚುನಾವಣಾಧಿಕಾರಿ ಎಂ.ಎಸ್. ಕರೀಗೌಡ್ರ, ಮಾಜಿ ಜಿಲ್ಲಾಧ್ಯಕ್ಷ ಮೋಹನ ಮಾಳಶೆಟ್ಟಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಪ್ರಮುಖರಾದ ಶ್ರೀಕಾಂತ ಖಟವಟೆ, ಜಗನ್ನಾಥಸಾ ಭಾಂಡಗೆ, ಬಿ.ಎಚ್. ಲದ್ವಾ, ಈಶಣ್ಣ ಮುನವಳ್ಳಿ, ಲೂಕ್ಕಣಸಾ ರಾಜೊಳ್ಳಿ, ಸಿದ್ದು ಪಲ್ಲೇದ, ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ, ಅನಿಲ ಅಬ್ಬಿಗೇರಿ, ಅಶೋಕ ಸಂಕಣ್ಣವರ, ಶಶಿಧರ ದಿಂಡೂರ, ಶಂಕರ ಕಾಕಿ, ಸುಧೀರ ಕಾಟಿಗರ, ದೇವಪ್ಪ ಗೊಟೂರ, ಭಗನ ರಾಜಪುರೋಹಿತ, ರಾಘವೇಂದ್ರ ಭಾಂಡಗೆ, ವಿಜಯ ಹಿರೇಮಠ, ಗೈಬುಸಾಬ ಕಲೇಬಾಯಿ, ಮುತ್ತಣ್ಣ ಮೂಲಿಮನಿ, ಡಿ.ಬಿ. ಕರೀಗೌಡ್ರ, ಸುಭಾಸ ಸುಂಕದ, ಸುರೇಶ ಹೆಬಸೂರ, ವಿನೋದ ಹಂಸನೂರ ಮುಂತಾದವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಗದಗ ನಗರ ಮಂಡಲ ಹಿಂದಿನ ಅಧ್ಯಕ್ಷ ಅನಿಲ ಅಬ್ಬಿಗೇರಿ ಇವರಿಂದ ನೂತನ ಅಧ್ಯಕ್ಷ ಸುರೇಶ ಮರಳಪ್ಪನವರರಿಗೆ ಪಕ್ಷದ ಶಾಲು ಹೊದೆಸಿ ಪಕ್ಷದ ಧ್ವಜ ಹಸ್ತಾಂತರಿಸಲಾಯಿತು.

# ಮೊಬೈಲ್ ಗೀಳಿನಿಂದ ಹೊರಬನ್ನಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿದ್ಯಾರ್ಥಿ ಜೀವನ ಅತ್ಯಮೂಲ್ಯವಾಗಿದ್ದು, ಕಲಿಕಾ ಹಂತದಲ್ಲಿ ಯಾವುದೇ ಹೊರ ಪ್ರಪಂಚದ ಆಕರ್ಷಣೆಗೆ ಒಳಗಾಗದೇ ಉನ್ನತ ಗುರಿಯೊಂದಿಗೆ ಶಿಸ್ತು, ಶ್ರದ್ಧೆ, ಪ್ರಾಮಾಣಿಕತೆಯಿಂದ ಅಭ್ಯಾಸದಲ್ಲಿ ತೊಡಗಿದರೆ ಭವಿಷ್ಯ ಉಜ್ವಲವಾಗಿರುತ್ತದೆ ಎಂದು ಬಿಸಿಎನ್ ಸಮೂಹ ಶಿಕ್ಷಣ ಸಂಸ್ಥೆಯ ನಿರ್ದೇಶಕ ಲೋಹಿತ ಬಸವರಾಜ ನೆಲವಗಿ ಹೇಳಿದರು.

ಅವರು ಇತ್ತೀಚೆಗೆ ಬಿಸಿಎನ್ ಪಿಯು ಕಾಲೇಜಿನಲ್ಲಿ ಪಪೂ ಶಿಕ್ಷಣ ಇಲಾಖೆ ಸಹಯೋಗದಲ್ಲಿ ದ್ವಿತೀಯ ಪಿಯು ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾಗಿದ್ದ ವಿಷಯ ತಜ್ಞರ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಕಾಲೇಜು ಹಂತದಲ್ಲಿ ವಿದ್ಯಾರ್ಥಿಗಳು ಮೊಬೈಲ್ ಗೀಳಿನಿಂದ ಹೊರಬಂದು ಸಮಯ ವ್ಯರ್ಥ ಮಾಡದೇ ಸತತಾಭ್ಯಾಸದಲ್ಲಿ ತೊಡಗಿಸಿಕೊಳ್ಳಬೇಕು.

ಈ ಹಂತದಲ್ಲಿ ಯಾವುದು ಸರಿ/ತಪ್ಪು ಮತು ಭವಿಷ್ಯ ನಿರ್ಧರಿಸುವ ಅರಿವು/ಸಾಮರ್ಥ್ಯ ನಿಮಗಿರುತ್ತದೆ. ಯಾವುದೇ ವಿಷಯದ ಬಗ್ಗೆ ಭಯ, ಹಿಂಜರಿಕೆ, ಕೀಳರಿಮೆ ಮನೋಭಾವ ಹೊಂದದೇ ವಿಷಯ ಶಿಕ್ಷಕರು, ಸ್ನೇಹಿತರೊಂದಿಗೆ ಚರ್ಚಿಸಿ ವಿಷಯ ಮನನ ಮಾಡಿಕೊಳ್ಳಬೇಕು ಎಂದರು.

ಸಂಪನ್ಮೂಲ ಉಪನ್ಯಾಸಕರಾಗಿ ಆಗಮಿಸಿದ್ದ ಹೆಚ್.ಎನ್. ಕಾಳೆ, ರವಿ ನಾಯಕ ಉಪನ್ಯಾಸ ನೀಡಿದರು.

ಅತಿಥಿಗಳಾಗಿ ಜಾನಾ ನಾಯಕ, ಬಿಸಿಎನ್ ಕಲಾ ಮತ್ತು ವಾಣಿಜ್ಯ ಕಾಲೇಜು, ಅಗಡಿ ಪಿಯು ಕಾಲೇಜು, ಪುರಸಭೆ ಕಲಾ ಮಹಾವಿದ್ಯಾಲಯದ ಉಪನ್ಯಾಸಕರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ಎಸ್.ವಿ. ಪದವಿಪೂರ್ವ ಕಾಲೇಜಿನಲ್ಲಿ ಗುರುವಂದನಾ ಕಾರ್ಯಕ್ರಮ

# ಜೀವನ ರೂಪಿಸುವ ಗುರುವಿನ ಶ್ರಮ ದೊಡ್ಡದು

■ ವಿಜಯಸಾಕ್ಷಿ ಸುದ್ದಿ, ರೋಣ

ನಾವು ಗಳಿಸಿದ ಆಸ್ತಿ, ಅಂತಸ್ತು, ಸಂಪತ್ತು ಯಾವುದೂ ಕೊನೆಯವರೆಗೂ ಉಳಿಯದು. ಆದರೆ ಕಲಿತ ವಿದ್ಯೆ ಮಾತ್ರ ಕೊನೆಯವರೆಗೂ ಜೊತೆಗಿರುತ್ತದೆ. ಹಾಗಾಗಿ ಪ್ರತಿಯೊಬ್ಬರ ಬಾಳು ಬೆಳಗುವ ಗುರುವಿನ ಶ್ರಮ ದೊಡ್ಡದು ಎಂದು ಗದುಗಿನ ವೀರೇಶ್ವರ ಪುಣ್ಯಶ್ರಮದ ಕಲ್ಲಯ್ಯಜ್ಜನವರು ಹೇಳಿದರು.

ರೋಣ ತಾಲೂಕಿನ ಬೆಳವಣಿಕಿ ಗ್ರಾಮದ ಎಸ್.ವಿ. ಪದವಿಪೂರ್ವ ಕಾಲೇಜಿನಲ್ಲಿ 1994–95ನೇ ಸಾಲಿನ ಎಸ್.ಎಸ್.ಎಲ್.ಸಿ ಹಾಗೂ 1996–97ನೇ ಸಾಲಿನ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಂದ ಜರುಗಿದ ಗುರುವಂದನೆ ಹಾಗೂ ಸ್ನೇಹ ಸಮ್ಮೇಳನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಜೀವನದಲ್ಲಿ ಗುರಿ, ಛಲ, ಗುರುವಿನ ಆಶೀರ್ವಾದ ಇದ್ದರೆ ಮಾತ್ರವೇ ವಿದ್ಯೆ ಕಲಿತು ಸಮಾಜದಲ್ಲಿ ಉನ್ನತ ಸ್ಥಾನ ಗಳಿಸಲು ಸಾಧ್ಯ. ಸಮಾಜದಲ್ಲಿ ಒಳ್ಳೆಯ ಸ್ಥಾನ–ಮಾನ ಪಡೆದಿದ್ದರೆ ಅದರ ಹಿಂದೆ ಪ್ರತಿಯೊಬ್ಬ ಗುರುವಿನ



ಶ್ರಮ ಅಡಗಿರುತ್ತದೆ. ಅವರು ಸಂಪಾದಿಸಿದ ವಿದ್ಯೆಯನ್ನು ಧಾರೆ ಎರೆಯುವ ಮೂಲಕ ಕಟ್ಟಿದ ಜ್ಞಾನದಿಂದಲೇ ನಾವು ಉನ್ನತ ಸ್ಥಾನಕ್ಕೇರಲು ಸಾಧ್ಯ ಎಂಬುದನ್ನು ಯಾರೂ ಮರೆಯಬಾರದು ಎಂದರು.

ವಿಜ್ಞಾನ ತಂತ್ರಜ್ಞಾನ ಮುಂದುವರಿದ ಈ ಕಾಲದಲ್ಲಿ ವಿಶ್ವವೇ ಒಂದು ಗ್ರಾಮದಂತಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಹಿರಿಯ ವಿದ್ಯಾರ್ಥಿಗಳೆಲ್ಲರನ್ನೂ ಒಟ್ಟುಗೂಡಿಸುವ, ತಮ್ಮ ಹಳೆಯ ದಿನಗಳನ್ನು ಮೆಲುಕು ಹಾಕುವ ಸುಂದರ ಕ್ಷಣಗಳಿಗೆ ಸಾಕ್ಷಿಯಾದ ಇಂತಹ ಕಾರ್ಯಕ್ರಮ ಇದೀಗ ಅಗತ್ಯವಿದೆ. ಆ ಮೂಲಕ ಈಗಿರುವ ವಿದ್ಯಾರ್ಥಿಗಳಿಗೂ ಸಾಧಿಸಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ನಿವೃತ್ತ ಪ್ರಾಚಾರ್ಯ ಕೆ.ವೈ. ಕೋರಿ ಮಾತನಾಡಿ, 35 ವರ್ಷಗಳ ನಂತರ ಮಾಡಿರುವ ಈ ಕಾರ್ಯಕ್ರಮ ಮಹಾಸಂಗಮವಾಗಿದೆ. ಇಲ್ಲಿ ಪ್ರಾಥಮಿಕ, ಪ್ರೌಢಶಾಲೆ ಮತ್ತು ಕಾಲೇಜು ಹಂತದ ಎಲ್ಲರನ್ನು ಒಂದು ಕಡೆ ಸೇರಿಸಿದ್ದು ಶ್ಲಾಘನೀಯ, ಅಷ್ಟೇ ಅಲ್ಲದೆ ವಯೋವೃದ್ಧರನ್ನು ಸನ್ಮಾನಿಸಿದ್ದು ಖುಷಿ ನೀಡಿದೆ ಎಂದರು.

ಅನೇಕ ಹಿರಿಯ ವಿದ್ಯಾರ್ಥಿಗಳ ತಮ್ಮ ಅನುಭವವನ್ನು ಹಂಚಿಕೊಂಡರು. ನಿವೃತ್ತ ಪ್ರಾಚಾರ್ಯ ಮೆಣಸಿಗೆ ಗುರುಗಳು, ಶಿಕ್ಷಕ ಐ.ಎಸ್. ಮೇಟಿ, ಎಸ್.ಆರ್. ಬಳಗಾನೂರಮಠ, ಎಂ.ವಿ. ಪೂಜಾರ, ಎ.ಎಂ. ಕೊಣ್ಣೂರ, ಮಂಜುಳಾ ಹೊಸಳ್ಳಿ, ಜ್ಯೋತಿ ಉಗಲಾಟ, ಉಮಾ ಹೊಸಂಗಡಿ, ಜ್ಯೋತಿ ಜಂತ್ಲಿ, ಬಿ.ಬಿ. ರಾಯರೆಡ್ಡಿ, ವಿಜಯಲಕ್ಷ್ಮೀ ಮರಿಗೌಡ್ರ, ಶಿವು ಹೊಸಂಗಡಿ, ಮಂಜು ರಿತ್ತಿ, ವೆಂಕಣ್ಣ ದಾದ್ಮಿ, ಹೇಮರೆಡ್ಡಿ ಹದ್ಲಿ ಇದ್ದರು.




ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಾದೇಶಿಕ ಕಾರ್ಯಾಗಾರದಲ್ಲಿ ಬೆಂಗಳೂರು ಇವರ ವತಿಯಿಂದ ಉಚಿತ ಎಲುಬು ಸಾಂದ್ರತೆ ತಪಾಸಣಾ ಶಿಬಿರ ಆಯೋಜಿಸಲಾಗಿತ್ತ. ಪ್ರಾದೇಶಿಕ ಕಾರ್ಯಾಗಾರದ ಕಾರ್ಯನಿರತ ಎಲ್ಲ ಅಧಿಕಾರಿ/ಸಿಬ್ಬಂದಿಗಳು ತಪಾಸಣೆ ಮಾಡಿಸಿಕೊಂಡು ಇದರ ಸದುಪಯೋಗ ಪಡೆದರು.

# ಶ್ರೀ ಸಿದ್ಧಾರೂಢರ ಜ್ಯೋತಿ ರಥಯಾತ್ರೆಗೆ ಭವ್ಯ ಸ್ವಾಗತ

■ ವಿಜಯಸಾಕ್ಷಿ ಸುದ್ದಿ, ಗದಗ

ಸಿದ್ಧಾರೂಢ ಸ್ವಾಮಿಗಳ 190ನೇ ಹಾಗೂ ಶ್ರೀ ಗುರುನಾಥರೂಢರ 115ನೇ ಜಯಂತ್ಯುತ್ಸವದ ಅಂಗವಾಗಿ ಶ್ರೀ ಸಿದ್ಧಾರೂಢ ಸ್ವಾಮಿ ಮಠ ಟ್ರಸ್ಟ್ ಕಮಿಟಿ ಹುಬ್ಬಳ್ಳಿ ಹಾಗೂ ವಿಶ್ವ ವೇದಾಂತ ಪರಿಷತ್ ವತಿಯಿಂದ ವಿಶ್ವ ಶಾಂತಿಗಾಗಿ ಆರೂಢ ಜ್ಯೋತಿ ಯಾತ್ರೆ ಹಾಗೂ ಶ್ರೀ ಸಿದ್ಧಾರೂಢ ಕಥಾಮೃತ ಮೆರವಣಿಗೆಯ ಶೋಭಾಯಾತ್ರೆ ರಾಜ್ಯಾದ್ಯಂತ ಸಂಚರಿಸಿದ್ದು, ಫೆ.20ರಿಂದ 26ರವರೆಗೆ ಅನೇಕ ಪೂಜಾ ಕೈಂಕರ್ಯಗಳನ್ನು ಹಮ್ಮಿಕೊಳ್ಳಲಾಗಿದೆ. ಗದಗ–ಬೆಟಗೇರಿ ಅವಳಿ ನಗರಕ್ಕೆ ಆಗಮಿಸಿದ ಜ್ಯೋತಿ ಯಾತ್ರೆಗೆ ಕಾನೂನು, ಸಂಸದೀಯ ವ್ಯವಹಾರಗಳು,



ಪ್ರವಾಸೋದ್ಯಮ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲರ ನೇತೃತ್ವದಲ್ಲಿ ಸ್ವಾಗತಿಸಿ, ನಗರದ ಪ್ರಮುಖ ರಸ್ತೆಗಳಲ್ಲಿ ಜ್ಯೋತಿಯು ಸಂಚರಿಸಿತು. ಮಹಿಳೆಯರು ಶ್ರೀಗಳ ಜ್ಯೋತಿ ಯಾತ್ರೆಗೆ ಆರತಿ ಬೆಳಗುವ ಮೂಲಕ ಸ್ವಾಗತ ಕೋರಿದರು. ಈ ಸಂಧರ್ಭದಲ್ಲಿ ಕಾಂಗ್ರೆಸ್ ಮಹಿಳಾ ಮುಖಂಡರಾದ ದ್ರಾಕ್ಷಾಯಣಿ ಹಾಸಲಕರ, ನಗರಸಭಾ ಸದಸ್ಯರಾದ ಶಕುಂತಲಾ ಅಕ್ಕಿ, ಪರ್ವಿನ್ ಬಾನು ಮುಲ್ಲಾ, ಲಕ್ಷ್ಮೀ ಸಿದ್ದಮ್ಮನಹಳ್ಳಿ, ಸಾವಿತ್ರಿ ಹೂಗಾರ, ಸುಧಾ ಬೂದಾರಪೂರ, ಸರಸ್ವತಿ ದೇವರಕೊಂಡಿ, ಲಲಿತಾ ಗೋಳಗೊಳಕಿ, ಲಕ್ಷ್ಮೀ ಜಾಲಿಗಂಡಿ, ರಾಜೇಶ್ವರಿ, ಕುಸುಮಾ, ಶೈಲಾ ಜ್ಯೋಶಿ, ಶೋಭಾ, ಬಾಳಮ್ಮ, ಕಮಲಾ ಹಾದಿಮನಿ, ಮುಸ್ತಾನ್ ಸೈದ್, ಗೀತಾ ಹಬೀಬಿ ಮುಂತಾದವರಿದ್ದರು.

### ಫೆ. 8ರಂದು ಕನಕಾಪುರ ದ್ಯಾಮವ್ವ ದೇವಿಯ ಜಾತ್ರಾ ಮಹೋತ್ಸವ

# ಇಷ್ಟಾರ್ಥಗಳನ್ನು ಈಡೇರಿಸುವ ದ್ಯಾಮವ್ವದೇವಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರತಿಯೊಂದು ಊರಿನಲ್ಲಿಯೂ ಗ್ರಾಮದೇವತೆಯಾಗಿ ದ್ಯಾಮವ್ವದೇವಿ ದೇವಸ್ಥಾನಗಳನ್ನು ಕಾಣಬಹುದು. ಗ್ರಾಮದೇವತೆ ಆಯಾ ಊರಿನ ಅಧಿದೇವತೆಯಾಗಿರುತ್ತಾಳೆ. ದೇವಿಯು ಗ್ರಾಮವನ್ನು ಕಾಯುವದರ ಜೊತೆಗೆ ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುತ್ತಾಳೆ ಎನ್ನುವ ನಂಬಿಕೆ ಬಹುತೇಕ ಗ್ರಾಮಗಳಲ್ಲಿ ಇದೆ. ಇಂತಹ ಇಷ್ಟಾರ್ಥಗಳನ್ನು ಈಡೇರಿಸುವ ಹಾಗೂ ನೂರಾರು ವರ್ಷಗಳ ಭವ್ಯ ಇತಿಹಾಸವನ್ನು ಹೊಂದಿರುವ ಪಟ್ಟಣದಿಂದ ಶಿಗ್ಲಿ ಗ್ರಾಮಕ್ಕೆ ತೆರಳುವ ಮಾರ್ಗ ಮಧ್ಯದಲ್ಲಿ ನೆಲೆನಿಂತಿರುವ ಕನಕಾಪುರ ದ್ಯಾಮವ್ವ ದೇವಿಯ ಇತಿಹಾಸವೇ ವಿಶಿಷ್ಟವಾಗಿದೆ.

ಕನಕಾಪುರ ಹೆಸರಿಗೆ ತಕ್ಕ ಹಾಗೆ ಧನ–ಕನಗಳಿಗೆ ಪ್ರಸಿದ್ಧವಾದ ಊರಾಗಿತ್ತು. ಗ್ರಾಮದ ಹೆಸರೇ ಹೇಳುವಂತೆ ಬಂಗಾರ, ಮುತ್ತು–ರತ್ನಗಳ ವ್ಯಾಪಾರವು ಭರಾಟೆಯಿಂದ ನಡೆಯುತ್ತಿದ್ದ ಕ್ಷೇತ್ರವಾಗಿತ್ತು. 30 ಎಕರೆಯಷ್ಟು ವಿಸ್ತಾರವಾದ ಪ್ರದೇಶದಲ್ಲಿ ಊರು ವ್ಯಾಪಿಸಿತ್ತು. ಸುತ್ತಲೂ ಸುಂದರವಾದ ದೇವಾಲಯಗಳು ಎತ್ತರವಾದ ಮುಡೆ, ಬಾವಿಗಳು ಇದ್ದವು. ಸ್ವಾತಂತ್ರ ಪೂರ್ವದಲ್ಲಿ ಈ ಭಾಗ ಸಂಸ್ಥಾನಿಕರ ಆಡಳಿತಕ್ಕೆ ಒಳಪಟ್ಟಿದ್ದವು. ಹಳ್ಳಿ ನೇರ ಬ್ರಿಟಿಷರ ಆಡಳಿತದಲ್ಲಿತ್ತು. 1850ರಿಂದ 1900ರ ಮಧ್ಯಕಾಲದಲ್ಲಿ ಕನಕಾಪುರ ಗ್ರಾಮಕ್ಕೆ ಸಾಂಕ್ರಾಮಿಕ ರೋಗಗಳು ಮತ್ತು ಕಳ್ಳಕಾಕರ ಪೀಡೆ



ಕಾಡತೊಡಗಿತು. ಇವೆರಡು ಕಾರಣಗಳಿಂದ ಊರು ಸಂಪೂರ್ಣ ಬರಿದಾಯಿತು. ಇದೇ ಕಾಲಾವಧಿಯಲ್ಲಿ ಸಮೀಪ ಇದ್ದ ಇನ್ನೂ ಎರಡು ಹಳ್ಳಿಗಳಾದ ಕಾನಕೊಪ್ಪ ಮತ್ತು ಉಪನಾಳ ಹಳ್ಳಿಗಳು ಸಹ ಖಾಲಿಯಾದವು.

ಕನಕಾಪೂರ ಅಷ್ಟೈಶ್ವರ್ಯ ತುಂಬಿಕೊಂಡಿದ್ದ ನಾಡಾಗಿತ್ತು. ಕಾಲಾಂತರಗಳಲ್ಲಿ ಇಲ್ಲಿ ಯಾರೂ ನೆಲೆ ನಿಲ್ಲದೆ ಇರುವದರಿಂದ ಈ ಗ್ರಾಮ ಸಂಪೂರ್ಣ ಹಾಳಾಗಿತ್ತು. ಇದು ಇನ್ನೂ ಕಂದಾಯ ಗ್ರಾಮಗಳಾಗದೆ ದಾಖಲೆಗಳಲ್ಲಿ ಉಳಿದಿವೆ. ಇದಕ್ಕೆ ಕಾಲಾವಧಿಯಲ್ಲಿ ಕುರುಹುಗಳಿವೆ. ದೇವಸ್ಥಾನ, ಬಂಗಾರ, ಮುತ್ತು–ರತ್ನಗಳನ್ನು ಮಾರುತ್ತಿದ್ದ ಗ್ರಾಮ ಹಾಳು ಸುರಿಯುವಚಿತಾಯಿತು. ಇದಕ್ಕೆ ಹಿನ್ನೆಲೆಯಾಗಿ ಹಲವಾರು ಕಥೆಗಳು ಕೇಳಿ ಬರುತ್ತವೆ. ಹೀಗೆ ಗ್ರಾಮ ನಾಶವಾದರೂ ಸಹ ಈ ದ್ಯಾಮವ್ವ ದೇವಿ ಅಲ್ಲಿಯೇ ನೆಲೆನಿಂತಿರುವದು ವಿಶಿಷ್ಟ ಎನ್ನಬಹುದು.

ದ್ಯಾಮವ್ವದೇವಿಗೆ ಶಿಗ್ಲಿ, ಲಕ್ಷೇಶ್ವರ, ಮಲ್ಲಾಪುರ ಸೇರಿದಂತೆ ದೂರದ ಊರುಗಳಲ್ಲಿಯೂ ಭಕ್ತರು ಸಾವಿರಾರು ಸಂಖ್ಯೆಯಲ್ಲಿದ್ದು, ಮಹಾನವಮಿ, ದೀಪಾವಳಿ, ಯುಗಾದಿ, ಪಟ್ಟಗಳಲ್ಲಿ ವಿಶೇಷ ಪೂಜೆಗಳು ಜರುಗುತ್ತವೆ. ದೇವಸ್ಥಾನವು ಹಂತ ಹಂತವಾಗಿ ಜೀರ್ಣೋದ್ಧಾರಗೊಳ್ಳುತ್ತಾ ಬಂದಿದೆ. ಈ ಮೂರು ಊರುಗಳ ಜನರು ಪಕ್ಕದ ಊರುಗಳಿಗೆ ವಲಸೆ ಹೋಗಿದ್ದರೆ, ತಮ್ಮ ಹಿರಿಯರ ನೆಲೆಗಳೊಂದಿಗೆ ಇಂದಿನ ಪೀಳಿಗೆಯವರು ಭಾವನಾತ್ಮಕ ಸಂಬಂಧ ಹೊಂದಿದ್ದಾರೆ. ಪ್ರತಿವರ್ಷ ಶ್ರಾವಣ ಮಾಸದಲ್ಲಿ ಅಲ್ಲಿ ಶ್ರೀದೇವಿಯ ದೇವಾಲಯಯಕ್ಕೆ ಪೂಜೆ ಸಲ್ಲಿಸಲು ಬರುತ್ತಾರೆ. ಭಕ್ತರೆಲ್ಲರ ಇಚ್ಛಾಶಕ್ತಿಯಿಂದ ಅಂದಾಜು 2 ಕೋಟಿ 25 ಲಕ್ಷ ರೂ ವೆಚ್ಚದಲ್ಲಿ ಸುಂದರ ಕಲ್ಲಿನ ದೇವಸ್ಥಾನ ನಿರ್ಮಾಣಕ್ಕೆ ಮುಂದಾಗಿದ್ದಾರೆ. ಭಕ್ತರು ತನು–ಮನ–ಧನದ ಸಹಾಯ–ಸಹಕಾರ ನೀಡಬೇಕು ಎಂದು ದೇವಸ್ಥಾನ ಕಮಿಟಿ ಕಾರ್ಯದರ್ಶಿ ಅಶೋಕ ಶಿರಹಟ್ಟಿ ತಿಳಿಸಿದ್ದಾರೆ.

ಇಂತಹ ಶಕ್ತಿ ದೇವತೆ ಕನಕಾಪೂರ ದ್ಯಾಮವ್ವ ದೇವಿ ದೇವಸ್ಥಾನದ ಜಾತ್ರಾ ಮಹೋತ್ಸವ ಹಲವಾರು ಕಾರಣಗಳಿಂದ ನಿಂತು ಹೋಗಿತ್ತು. ಕಳೆದ 5 ವರ್ಷಗಳಿಂದ ಭಕ್ತರ ಅಭೀಷ್ಟೆಯ ಮೇರೆಗೆ ಜಾತ್ರೆ ಪ್ರಾರಂಭವಾಗಿದ್ದು, ಫೆ. 8ರಂದು 6ನೇ ವರ್ಷದ ಜಾತ್ರಾ ಮಹೋತ್ಸವ, ಫೆ.9ರಂದು ಕಡುಬಿನ ಕಾಳಗ ನೆರವೇರಲಿದೆ.

### ತಹಸೀಲ್ದಾರರ ಕಚೇರಿಯೆದುರು ನಡೆದ ಪ್ರತಿಭಟನೆಯಲ್ಲಿ ಯು.ಬಸವರಾಜ್

# ಸಾಗುವಳಿದಾರರಿಗೆ ಸಾಗುವಳಿ ಚೀಟಿ ನೀಡಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಭೂಮಿ ಸಾಗುವಳಿದಾರರಿಗೆ ಸಾಗುವಳಿ ಚೀಟಿ ಹಾಗೂ ಹಕ್ಕುಪತ್ರ ನೀಡಲು ಅಧಿಕಾರಿಗಳು ಅಸಡ್ಡೆ ತೋರುತ್ತಿದ್ದಾರೆ ಎಂದು ಕರ್ನಾಟಕ ಪ್ರಾಂತ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಯು.ಬಸವರಾಜ ಆರೋಪಿಸಿದರು.

ನಗರದ ತಹಸೀಲ್ದಾರರ ಕಚೇರಿಯೆದುರು ಕರ್ನಾಟಕ ಪ್ರಾಂತ ರೈತ ಸಂಘ, ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರರ ಸಂಘದ ನೇತೃತ್ವದಲ್ಲಿ ನಡೆದ ಪ್ರತಿಭಟನೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಜಮೀನು ಗ್ರಾಮೀಣ ಜನರ ಉತ್ಪಾದನೆಯ ಏಕೈಕ ಮಾರ್ಗವಾಗಿದೆ. ತಾಲೂಕಿನಲ್ಲಿರುವ ಬಗರ್ ಹುಕುಂ ಸಾಗುವಳಿದಾರರಿಗೆ ಭೂಮಿ ಮಂಜೂರು ಮಾಡಿಲ್ಲ. ಅರ್ಜಿ ಸಲ್ಲಿಸಿದವರಿಗೆ ಮನೆ, ನಿವೇಶನ ಹಂಚಿಲ್ಲ. ಸಾಗುವಳಿ ಚೀಟಿಗಳನ್ನು ನೀಡುವಲ್ಲಿ ಅಧಿಕಾರಿಗಳು, ಜನಪ್ರತಿನಿಧಿಗಳು ನಿರ್ಲಕ್ಷ್ಯ ತೋರುತ್ತಿದ್ದಾರೆ ಎಂದರು.

ಕರ್ನಾಟಕ ಪ್ರಾಂತ ಕೃಷಿಕೂಲಿಕಾರ ಸಂಘದ ತಾಲೂಕಾಧ್ಯಕ್ಷ ಬಾಲು ರಾಠೋಡ ಮಾತನಾಡಿ,



ಬಗರ್ ಹುಕುಂ ಸಾಗುವಳಿದಾರರ ಬೇಡಿಕೆಗಳಿಗೆ ಸಂಬಂಧಿಸಿದಂತೆ ಅನೇಕ ಬಾರಿ ಸ್ಥಳೀಯ ಶಾಸಕರು, ಜಿಲ್ಲಾಧಿಕಾರಿ, ಎಸಿ ಸೇರಿ ವಿವಿಧ ಅಧಿಕಾರಿಗಳಿಗೆ ಮನವಿ ಮಾಡಿದರೂ ಯಾರೂ ಗಮನ ಹರಿಸಿಲ್ಲ. ಸುಪ್ರೀಂಕೋರ್ಟ್ ಆದೇಶದ ಪ್ರಕಾರ ಯಾವುದೇ ರೈತರನ್ನು ಒಕ್ಕಲೆಬ್ಬಿಸದೇ ಕಾಯ್ದೆಯಡಿ ಪರಿಶೀಲಿಸಿ ಹಕ್ಕುಪತ್ರ, ಸಾಗುವಳಿ ಚೀಟಿ ನೀಡಬೇಕು.

ರಾಜ್ಯದಲ್ಲಿ ಲಕ್ಷಾಂತರ ಮಂದಿ ಸಾಗುವಳಿದಾರರು 3 ತಲೆಮಾರುಗಳಿಂದ ಭೂಮಿಯನ್ನು ಸಾಗುವಳಿ ಮಾಡುತ್ತಾ ಬಂದಿದ್ದಾರೆ. ಅಲ್ಲದೆ ಅದನ್ನು ಸಕ್ರಮಗೊಳಿಸಲು ನಮೂನೆ 50, 53, 57ರಲ್ಲಿ ಅರ್ಜಿ ಸಲ್ಲಿಸಿದ ಸಾಗುವಳಿದಾರರಿಗೆ ಅರ್ಜಿ ಪರಿಶೀಲಿಸಿ ಸಾಗುವಳಿ ಚೀಟಿ ನೀಡದೆ ಅಧಿಕಾರಿಗಳು ಸತಾಯಿಸುತ್ತಿದ್ದಾರೆ ಎಂದರು.

ಈ ವೇಳೆ ತಹಸೀಲ್ದಾರ ಕಿರಣಕುಮಾರ್ ಕುಲಕರ್ಣಿ ಮನವಿ ಸ್ವೀಕರಿಸಿ ಮೇಲಾಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದರು.

ಪೀರು ರಾಠೋಡ, ಚೆನ್ನಪ್ಪ ಗುಗಲೋತ್ತರ, ದಾವಲಸಾಬ ತಾಳಿಕೋಟಿ, ಚಂದ್ರು ರಾಠೋಡ, ಮೆಹಬೂಬ್ ಹವಾಲ್ದಾರ್, ಗಣೇಶ ಮಾಳೋತ್ತರ, ರೂಪ್ಲೇಶ ಮಾಳೋತ್ತರ, ವಿರೇಶ ರಾಠೋಡ, ಕುಮಾರ ರಾಠೋಡ, ಶಾಮಿದಸಾಬ ದಿಂಡವಾಡ, ದೀಪಲೇಪ್ಪ ರಾಠೋಡ, ದಿಂಡುರು ಚವಳವ್ವ ರಾಠೋಡ, ಗುಬಾವ್ವ ರಾಠೋಡ, ರೇಣವ್ವ, ಗುಗಳೋತ್ತರ, ಕೃಷ್ಣಪ್ಪ ಮಾಳೋತ್ತರ, ಶಿವಪ್ಪ ಮಾಳೋತ್ತರ ಮುಂತಾದವರಿದ್ದರು.

ಕರ್ನಾಟಕ ಪ್ರಾಂತ ರೈತ ಸಂಘದ ಕಾರ್ಯದರ್ಶಿ ಎಂ.ಎಸ್ ಹಡಪದ ಮಾತನಾಡಿ, ತಾಲೂಕಿನ ಜನರು ಬಗರ್ ಹುಕುಂ ಸಾಗುವಳಿ ಮಂಜೂರಾತಿಗಾಗಿ ಅರ್ಜಿ ಸಲ್ಲಿಸಿ ಅನೇಕ ವರ್ಷಗಳು ಕಳೆದಿದೆ. ಭೂಮಿ ಮಂಜೂರು ಮಾಡುವಂತೆ ಸರ್ಕಾರಿ ಆದೇಶ ಇದ್ದರೂ, ಭೂಮಿ ಮಂಜೂರು ಮಾಡಿಲ್ಲ. ಪುನಃ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಕೊಡಬೇಕು. ಶಾಸಕರ ಅಧ್ಯಕ್ಷತೆಯಲ್ಲಿ ಇರುವ ಭೂ ಮಂಜೂರಾತಿ ಸಮಿತಿಯನ್ನು ತಕ್ಷಣವೇ ಕರೆದು ಸಮಸ್ಯೆ ಇತ್ಯರ್ಥಗೊಳಿಸಬೇಕು ಎಂದು ಆಗ್ರಹಿಸಿದರು.

## ಶ್ರೀ ಮಹಾಗಣಪತಿ ಸಭಾಭವನ ಉದ್ಘಾಟನೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಎಪಿಎಂಸಿಯ ಎಸ್.ಬಿ.ಎಸ್ ಬಡಾವಣೆಯಲ್ಲಿ ಫೆ. 8ರಂದು ಬೆಳಿಗ್ಗೆ 10 ಗಂಟೆಗೆ ಶ್ರೀ ಮಹಾಗಣಪತಿ ಸಭಾಭವನ ಉದ್ಘಾಟನೆ ಮತ್ತು ಶ್ರೀ ಮಹಾಗಣಪತಿ ದೇವಸ್ಥಾನದ 7ನೇ ವಾರ್ಷಿಕೋತ್ಸವ ಜರುಗಲಿದೆ.

ಕಾರ್ಯಕ್ರಮದಲ್ಲಿ ಅಡ್ನೂರು-ರಾಜೂರು-ಗದಗ ಬ್ರಹನ್ಮಠದ ಪೂಜ್ಯಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪೂಜ್ಯಶ್ರೀ ಕಲ್ಲಯ್ಯಜ್ಜನವರು ಸಮ್ಮುಖ ವಹಿಸುವರು. ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಸಭಾಭವನ ಉದ್ಘಾಟಿಸುವರು. ಎಸ್.ಬಿ.ಎಸ್. ಬಡಾವಣೆಯ ಅಧ್ಯಕ್ಷ ದೀಪಕ ಕಳಸಣ್ಣವರ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ನಗರಸಭೆ ಸದಸ್ಯೆ ಲಲಿತಾ ಅಸೂಟಿ, ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಯದೇವ ಕಮ್ಮಾರ, ಸುರೇಶ ಹಾವನೂರ ಉಪಸ್ಥಿತರಿರುವರು.

ಇದೇ ಸಂದರ್ಭದಲ್ಲಿ ಸಭಾಭವನಕ್ಕೆ ದೇಣಿಗೆ ನೀಡಿದ ದಾನಿಗಳನ್ನು ಸನ್ಮಾನಿಸಲಾಗುವುದು. ನಂತರ ಮಧ್ಯಾಹ್ನ 1 ಗಂಟೆಗೆ ಅನ್ನಸಂತರ್ಪಣೆ ಕಾರ್ಯಕ್ರಮ ಜರುಗುವದು. ಸಂಜೆ 6 ಗಂಟೆಗೆ ಎಚ್.ಎಸ್. ವೆಂಕಟಾಪೂರದ ಗಣೇಶ ಮೆಲೋಡಿಸ್ ಅರ್ಕೆಸ್ಟ್ರಾ ಅವರಿಂದ ರಸಮಂಜರಿ ಕಾರ್ಯಕ್ರಮ ಮತ್ತು ಎಸ್.ಬಿ.ಎಸ್ ಬಡಾವಣೆಯ ಮಹಿಳೆಯರು ಮತ್ತು ಮಕ್ಕಳಿಂದ ಸಂಗೀತ ಮತ್ತು ನೃತ್ಯ ಕಾರ್ಯಕ್ರಮ ಜರುಗುವದು ಎಂದು ಶ್ರೀ ಮಹಾಗಣಪತಿ ದೇವಸ್ಥಾನ ಆಡಳಿತ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ.

### 2731ನೇ ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು

## ಸೌಹಾರ್ದಯುತ ಬದುಕಿಗೆ ವಚನಗಳು ಅತ್ಯಗತ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಶರಣರ ವಚನಗಳು ಮಾನವೀಯ ಮೌಲ್ಯಗಳಿಂದ ಕೂಡಿದ್ದು, ಪ್ರಸ್ತುತ ದಿನಮಾನಕ್ಕೆ ದಾರೀದಿಪವಾಗಿದೆ. ಬಸವಾದಿ ಶಿವಶರಣರ ಬದುಕು ಮತ್ತು ವಚನಗಳು ಆತ್ಮಕಲ್ಯಾಣದ ಜೊತೆಗೆ ಸಮಾಜ ಕಲ್ಯಾಣನ್ನುಂಟು ಮಾಡುತ್ತವೆ. ಶಾಂತಿ, ಸೌಹಾರ್ದಯುತ ಬದುಕಿಗೆ ಶರಣರ ಆದರ್ಶಗಳು, ವಚನಗಳು ಬಹಳಷ್ಟು ಅವಶ್ಯ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2731ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಶ್ರೀಗಳು, ಪ್ರತಿಯೊಂದು ವಚನದ ಸಾಲಿನಲ್ಲಿ, ಶಬ್ದದಲ್ಲಿಯೂ ಮೌಲ್ಯಯುತ ಸಂದೇಶವನ್ನು ಕಾಣಬಹುದು. 'ನುಡಿದರೆ ಮುತ್ತಿನ ಹಾರದಂತಿರಬೇಕು' 'ನಡೆದಂತೆ ನುಡಿ. ನುಡಿದಂತೆ ನಡೆ' ಇದು ಜೀವನದ ಮೌಲ್ಯವಾಗಬೇಕು ಎಂದು ವಚನಗಳ ಮೂಲಕ ತಿಳಿಸಿದರು.

'ಮಾಣಿಕ್ಯದ ದೀಪ್ತಿಯಂತಿರಬೇಕು' ದೀಪ್ತಿ ಅದ್ಭುತವಾದ ಬೆಳಕು. ನಮ್ಮ ನುಡಿಗಳು ಪಾರದರ್ಶಕವಾಗಿರಬೇಕು. ಮಾತು ಮತ್ತು



ಕೃತಿಗಳು ಒಂದಾಗಿರಬೇಕು. ಹೇಳುವುದೊಂದು ಬರೆಯುವದೊಂದು ಆಗಬಾರದು. ಶರಣರು ಹೇಳಿದಂತೆ ನಡೆದರು. ಬದುಕಿಗೆ ಮೌಲ್ಯಗಳನ್ನು ಬಿತ್ತಿದರು. ಜಾತಿ, ಮತ, ಪಂಥ, ಸ್ತ್ರೀ-ಪುರುಷ ತಾರತಮ್ಯ ಬಿಟ್ಟು ಸಮಾನತೆಯಿಂದ ಎಲ್ಲರೂ ಬದುಕಬೇಕು ಎಂದು ಶ್ರೀಗಳು ನುಡಿದರು.

ಪಿ.ಪಿ.ಜಿ. ಕಾಲೇಜಿನ ನಿವೃತ್ತ ಪ್ರಾಚಾರ್ಯರಾದ ಡಾ. ಸುಮಿತ್ರಾ ಕಾಡದೇವರಮಠ ಸಂಗೀತ ಸೇವೆಯನ್ನು ನೀಡಿದರು. ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ವಚನ ಸಂಗೀತ ನೆಡೆಸಿಕೊಟ್ಟರು. ಧರ್ಮಗ್ರಂಥ ಪಠಣವನ್ನು ಭೂಮಿಕಾ ಕೆ.ತುಕ್ಕಪ್ಪನವರ ಮಾಡಿದರೆ, ವಚನ ಚಿಂತನೆಯನ್ನು ಬಸವರಾಜ ಕೆ.ತುಕ್ಕಪ್ಪನವರ ನಡೆಸಿದರು. ದಾಸೋಹ ಸೇವೆಯನ್ನು ವಿಜಯಪುರದ ಇಂದ್ರಾಬಾಯಿ ಪಾಟೀಲ ಹಾಗೂ ಕುಟುಂಬ ವರ್ಗದವರು ವಹಿಸಿಕೊಂಡಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಗಂಜಿಹಾಳ, ಸಂಘಟನಾ ಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ ಹಿರೇಮಠ, ಸಹ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಸಹ ಚೇರಮನ್ ಶಿವಾನಂದ ಹೊಂಬಳ ಹಾಗೂ ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು.

ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತ ಕೋರಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

ಉಪಾನ್ಯಾಕರಾಗಿ ಆಗಮಿಸಿದ್ದ ಶಿರಹಟ್ಟಿ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಎಂ.ಕೆ. ಲಮಾಣಿ ಮಾತನಾಡಿ, ವಚನಗಳಲ್ಲಿ ಅತ್ಯಮೂಲ್ಯವಾದ ಜೀವನದ ಆದರ್ಶಗಳನ್ನು ಕಾಣುತ್ತೇವೆ. ಮೋಸ, ವಂಚನೆಗಳಿಂದ ದೂರಾದ ಬದುಕೇ ನಿಜವಾದ ಮೌಲ್ಯ. ಶರಣರ ಬದುಕಿನಲ್ಲಿ, ವಚನಗಳಲ್ಲಿ ಆದರ್ಶದ ಹೂವುಗಳು ಅರಳಿವೆ. ಸಿಹಿಯಾದ ಹಣ್ಣುಗಳೇ ಬಿಟ್ಟಿವೆ. ವಚನಗಳನ್ನು ಓದಿದಾಗ, ಹೂವುಗಳ ಸುವಾಸನೆ, ಹಣ್ಣುಗಳ ಸಿಹಿ ಸಹಜವಾಗಿ ಲಭಿಸುತ್ತವೆ. ಅವರ ವಚನಗಳ ಸಾರವೇ ಜಗಕೆ ದಾರಿದೀಪ ಎಂದರು.

## ರುದ್ರಭೂಮಿ ಅಭಿವೃದ್ಧಿಪಡಿಸಲು ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅವಳಿ ನಗರದ ನಗರಸಭೆ ವ್ಯಾಪ್ತಿಗೆ ಬರುವ ವಾರ್ಡ್ ನಂ. 21ರಲ್ಲಿನ ಕುರುಬ ಸಮಾಜದ ರುದ್ರಭೂಮಿ ಅವ್ಯವಸ್ಥೆಯ ತಾಣವಾಗಿದೆ. ಸರಿಯಾದ ನಿರ್ವಹಣೆ ಇಲ್ಲದೇ ಸೊರಗುತ್ತಿದ್ದ, ಕೂಡಲೇ ಕುರುಬ ಸಮುದಾಯದ ರುದ್ರಭೂಮಿಯನ್ನು ಸ್ವಚ್ಛಗೊಳಿಸಿ ಸುಗಮ ಅಂತ್ಯ ಸಂಸ್ಕಾರಕ್ಕೆ ಅವಕಾಶ ಮಾಡಿಕೊಡಬೇಕೆಂದು ಗದಗ-ಬೆಟಗೇರಿ ನಗರಸಭೆಯ ನಾಮನಿರ್ದೇಶಿತ ಸದಸ್ಯ ಹಾಗೂ ಸಾಮಾಜಿಕ ಕಾರ್ಯಕರ್ತ ಶರಣಪ್ಪ ಗೋಳಗೊಳಕಿ ಪೌರಾಯುಕ್ತರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಅವರು, ಕುರುಬ ಸಮುದಾಯದ



ರುದ್ರಭೂಮಿಯಲ್ಲಿ ಜಾಲಿ ಕಂಟೆಗಳು ಬೆಳೆದಿವೆ, ಸೂಕ್ತ ವಿದ್ಯುತ್ ವ್ಯವಸ್ಥೆಯಿಲ್ಲ. ಇದರಿಂದ ಅಂತ್ಯಸಂಸ್ಕಾರ ನಡೆಸಲು ತೀವ್ರ ತೊಂದರೆಯಾಗುತ್ತಿದೆ. ಈಗಾಗಲೇ ಎಲ್ಲ ಸಮುದಾಯಗಳ ರುದ್ರಭೂಮಿಗೆ ಹಲವಾರು ಮೂಲಭೂತ ಸೌಲಭ್ಯಗಳನ್ನು ನಗರಸಭೆಯಿಂದ ಕಲ್ಪಿಸಿಕೊಡಲಾಗಿದೆ. ಅದೇ ರೀತಿ ಕುರುಬ ಸಮುದಾಯದ ರುದ್ರಭೂಮಿಗೂ ಅಗತ್ಯ ಮೂಲಭೂತ ಸೌಲಭ್ಯ ನೀಡಿ ಅನುಕೂಲ ಮಾಡಿಕೊಡಬೇಕು ಎಂದು ವಿನಂತಿಸಿದರು.

## ಸಾಧಕರ ಚರಿತ್ರೆ ವಿದ್ಯಾರ್ಥಿಗಳ ಭವಿಷ್ಯಕ್ಕೆ ಬುನಾದಿ

■ ವಿಜಯಸಾಕ್ಷಿ ಸುದ್ದಿ, ಗದಗ

ಶೈಕ್ಷಣಿಕ ಜೀವನದ ಪ್ರಗತಿಗೆ ಪೂರಕವಾಗಿರುವುದರಿಂದ ಕಲಿತ ಶಿಕ್ಷಣ ಸಂಸ್ಥೆಯನ್ನು, ಕಲಿಸಿದ ಶಿಕ್ಷಕರನ್ನು ಎಂದಿಗೂ ಮರೆಯದೆ ಗೌರವ ಕೊಡುವ ಪ್ರವೃತ್ತಿಯನ್ನು ಬೆಳೆಸಿಕೊಳ್ಳಬೇಕು ಹಾಗೂ ಸಾಧನೆಗೈದ ಸಾಧಕರ ಚರಿತ್ರೆಯನ್ನು ಓದಬೇಕೆಂದು ತೆ-ೂಂಟದಾರ್ಯ ಪಿಯು ಕಾಲೇಜಿನ ನಿವೃತ್ತ ಪ್ರಾಚಾರ್ಯ ಎಂ.ಎ. ನರಗುಂದ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಅವರು ಸ್ಥಳೀಯ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಜರುಗಿದ ವಾರ್ಷಿಕ ಸ್ನೇಹ ಸಮ್ಮೇಳನ,



ಪಾರಿತೋಷಕ ವಿತರಣೆ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಕಾಲೇಜಿನ ಸ್ಥಾನಿಕ ಆಡಳಿತ ಮಂಡಳಿಯ ಸದಸ್ಯರಾದ ಎ.ಎಮ್. ಮುಲ್ಲಾ ಮಾತನಾಡುತ್ತ, ಎಷ್ಟೇ ಸಮಸ್ಯೆಗಳು ಇದ್ದರೂ ಓದಿನ ಕಡೆಗೆ ಗಮನ ಹರಿಸಿದಾಗ ಮಾತ್ರ ಭವಿಷ್ಯ ರೂಪಗೊಳ್ಳಲು ಸಾಧ್ಯವಾಗುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಆರ್.ಎಸ್. ಮೂಲಿಮನಿ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು, ಸಂಯಮ, ಸಮಯ ಪ್ರಜ್ಞೆ ಯೊಂದಿಗೆಅಧ್ಯಯನದಲ್ಲಿ ಆಸಕ್ತಿಯನ್ನು ಬೆಳೆಸಿಕೊಳ್ಳಬೇಕೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರಾಚಾರ್ಯರಾದ ಬಿ.ಬಿ. ಪಾಟೀಲ, ಶಿಕ್ಷಣ ಎಂಬುದು ವಿದ್ಯಾರ್ಥಿಗಳಿಗೆ ಬೆನ್ನೆಲುಬು ಇದ್ದಂತೆ. ಪ್ರತಿಭಾ ಶಕ್ತಿಯನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಪ್ರತಿಭಾವಂತ ವಿದ್ಯಾರ್ಥಿಗಳೇ ಶಿಕ್ಷಣ ಸಂಸ್ಥೆಗೆ ಕಿರೀಟ ಇದ್ದಂತೆ ಎಂದು ತಿಳಿಸಿದರು. ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಎಲ್.ಎಸ್. ಪಾಟೀಲ ಉಪಸ್ಥಿತರಿದ್ದರು. ಆಡಳಿತ ಅಧಿಕಾರಿಗಳಾದ ಆರ್. ಎಸ್. ಪಾಟೀಲ ಮಾತನಾಡಿದರು. ಸಾಂಸ್ಕೃತಿಕ ಮತ್ತು ಕ್ರೀಡಾಕೂಟಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ವಾಯ್.ಎಸ್. ಹುನಗುಂದ, ಝಡ್. ಎಫ್. ಹೊಸಮನಿ ಪಾರಿತೋಷಕ ವಿತರಿಸಿದರು. ಎ.ಆಯ್. ಹುಂದಿ ಸ್ವಾಗತಿಸಿದರು. ಎಮ್.ಡಿ. ಮಾದರ ಅತಿಥಿಗಳನ್ನು ಪರಿಚಯಿಸಿದರು. ಶ್ರೀಮತಿ ಪವಾರ ಕಾರ್ಯಕ್ರಮ ನಿರೂಪಿಸಿದರು.

## ಅಡವಿಸೋಮಾಪೂರ: ವಿಶ್ವ ಕ್ಯಾನ್ಸರ್ ದಿನಾಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಅಸಾಂಕ್ರಾಮಿಕ ರೋಗಗಳಲ್ಲಿ ಹೃದಯ ಸಂಬಂಧಿತ ಖಾಯಿಲೆಯ ನಂತರದಲ್ಲಿ ಕ್ಯಾನ್ಸರ್‌ನಿಂದ ಅತೀ ಹೆಚ್ಚು ಸಾವುಗಳು ಸಂಭವಿಸುತ್ತಿವೆ. ಕ್ಯಾನ್ಸರ್ ಖಾಯಿಲೆಯು ಅನಿಯಂತ್ರಿತ ಜೀವಕೋಶ ವಿಭಜನೆಗಳಿಂದ ದೇಹದಲ್ಲಿ ಬೆಳವಣಿಗೆಯಾಗುವ ಗಡ್ಡೆ.

ಕ್ಯಾನ್ಸರ್ ಜೀವಕೋಶವು ಲಿಂಫ್‌ನೋಡ್ಸ್ ಮುಖಾಂತರ ದೇಹದ ಎಲ್ಲಾ ಭಾಗಗಳಲ್ಲಿ ಪಸರಿಸುತ್ತದೆ. ಕ್ಯಾನ್ಸರ್ ರೋಗದಲ್ಲಿ ನಾಲ್ಕು ಹಂತಗಳಿದ್ದು, ಮೊದಲನೇ ಮತ್ತು ಎರಡನೇ ಹಂತದಲ್ಲಿರುವ ಕ್ಯಾನ್ಸರ್ ರೋಗವನ್ನು ತಜ್ಞ ವೈದ್ಯರಲ್ಲಿ ಚಿಕಿತ್ಸೆ ಪಡೆದರೆ ಸಂಪೂರ್ಣ ಗುಣಪಡಿಸಬಹುದೆಂದು ಆರೋಗ್ಯ ನಿರೀಕ್ಷಣಾಧಿಕಾರಿ ಶಿದ್ದಪ್ಪ ಎನ್.ಲಿಂಗದಾಳ ತಿಳಿಸಿದರು.

ಅವರು ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಾ ಘಟಕ, ಜಿಲ್ಲಾ ಅಸಾಂಕ್ರಾಮಿಕ ರೋಗಗಳ ವಿಭಾಗ, ತಂಬಾಕು ನಿಯಂತ್ರಣಕೋಶ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಲಕ್ಕುಂಡಿ, ಆಯುಷ್ಮಾನ ಆರೋಗ್ಯ ಕೇಂದ್ರ ಅಡವಿಸೋಮಾಪೂರ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಕ್ಯಾನ್ಸರ್ ದಿನದಂದು ಕ್ಯಾನ್ಸರ್ ಕುರಿತು ಅರಿವು ಮೂಡಿಸುವ ಎನ್.ಸಿ.ಡಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಮುದಾಯ ಆರೋಗ್ಯಾಧಿಕಾರಿಗಳಾದ ಲಕ್ಷ್ಮೀ ಬಿ ಮಾತನಾಡಿ, ಈಗಿನ ಆಧುನಿಕ ಜೀವನ ಶೈಲಿ ಮತ್ತು ತಂಬಾಕು ಸೇವನೆಯಿಂದ ಅತೀ ಹೆಚ್ಚು ಕ್ಯಾನ್ಸರ್ ರೋಗಗಳು ಕಂಡುಬರುತ್ತಿವೆ. ಪುರುಷರಲ್ಲಿ ಬಾಯಿ, ಅನ್ನನಾಳ, ಶ್ವಾಸಕೋಶ ಮತ್ತು ಲೀವರ್ ಕ್ಯಾನ್ಸರ್‌ಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಮಹಿಳೆಯರಲ್ಲಿ ಸ್ತನ, ಗರ್ಭಕಂಠ ಮತ್ತು ಅಂಡಾಣುವಿನ ಕ್ಯಾನ್ಸರ್ ಸಾಮಾನ್ಯವಾಗಿ ಕಂಡುಬರುತ್ತವೆ. ಕ್ಯಾನ್ಸರ್ ರೋಗಿಗಳಿಗೆ ಸರಿಯಾದ ಚಿಕಿತ್ಸೆ, ಆರೈಕೆ ಹಾಗೂ ಮನೋಸ್ಥೈರ್ಯದ ಮಾತುಗಳಿಂದ ಗುಣಪಡಿಸಬಹುದು.

ಉತ್ತಮ ಜೀವನ ಶೈಲಿ, ಸಮತೋಲನ ಆಹಾರ, ತರಕಾರಿ ಹಣ್ಣು-ಹಂಪಲಗಳ ಸೇವನೆ, ಪ್ರತಿನಿತ್ಯ ಯೋಗ, ಧ್ಯಾನ ಮತ್ತು ದೈಹಿಕ ಚಟುವಟಿಕೆಯಿಂದ ಕ್ಯಾನ್ಸರ್ ಖಾಯಿಲೆ ಬರದಂತೆ ತಡೆಯಬಹುದೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಆಶಾ ಕಾರ್ಯಕರ್ತೆ ಮಾಲಾ ಮೇವುಂಡಿ, ರೇಣುಕಾ ಪುರದ, ಶಾಂತಾ ಖಾನಾಪೂರ ಮುಂತಾದವರು ಉಪಸ್ಥಿತರಿದ್ದರು.

### ಬಸವಪ್ರಭೆ ಆವರಣದಲ್ಲಿ ಸೂರ್ಯನಮಸ್ಕಾರ ಯಜ್ಞ

## ಸೂರ್ಯ ನಮಸ್ಕಾರ ಆರೋಗ್ಯದ ಬುನಾದಿ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಸಂಸ್ಕೃತಿ, ಪರಂಪರೆಗಳ ಆಚರಣೆಯಲ್ಲಿ ರಥಸಪ್ತಮಿ ಆಚರಣೆ ವಿಶಿಷ್ಟ ಮತ್ತು ವೈಜ್ಞಾನಿಕವಾದುದಾಗಿದೆ. ಕಾರಣ ರಥಸಪ್ತಮಿ ಸೂರ್ಯದೇವರ ಆರಾಧನೆಯ ದಿನವಾಗಿದೆ. ಅಂದು ಕೆಲವರು ಧಾರ್ಮಿಕ ವಿಧಿ ವಿಧಾನಗಳಿಂದ ಸೂರ್ಯನನ್ನು ಆರಾಧಿಸಿದರೆ, ಇನ್ನು ಕೆಲವರು ಸೂರ್ಯ ನಮಸ್ಕಾರ, ವ್ಯಾಯಾಮ, ಸಾಧನೆಗಳ ಮೂಲಕ ಸೂರ್ಯನಿಗೆ ವಂದನೆ ಸಲ್ಲಿಸುವರು. ಸೂರ್ಯ ನಮಸ್ಕಾರದಲ್ಲಿ ಆಧ್ಯಾತ್ಮ, ಆರೋಗ್ಯ ಯೋಗ, ವ್ಯಾಯಾಮಗಳೆಲ್ಲವೂ ಸಮ್ಮಿಳಿತವಾಗಿವೆ ಎಂದು ಶರೀರ ರಚನಾ-ಕ್ರಿಯಾಶಾಸ್ತ್ರ ತಜ್ಞರು ಮತ್ತು ನಾಡಿ ವೈದ್ಯರಾದ ಡಾ. ಎಸ್.ಬಿ. ಗೋವಿಂದಪ್ಪನವರ ತಿಳಿಸಿದರು.

ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಸಿದ್ಧಲಿಂಗನಗರ ಗದಗ ಇವರುಗಳ ಸಹಯೋಗದಲ್ಲಿ



ರಥ ಸಪ್ತಮಿ ಆಚರಣೆ ಪ್ರಯುಕ್ತವಾಗಿ ನಡೆಸಿದ ಸೂರ್ಯ ನಮಸ್ಕಾರ ಯಜ್ಞ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಹಿರಿಯ ಔಷಧ ವಿತರಣಾಧಿಕಾರಿಗಳಾದ ದತ್ತಾತ್ರೇಯ ತಿರುಮಲೆ ಮಾತನಾಡಿ, ಇತ್ತೀಚೆಗೆ ದೇವರ ಪೂಜೆ, ಹಿರಿಯರಿಗೆ ಗೌರವ ಸಲ್ಲಿಸುವ ಆಚರಣೆಗಳು ಕಡಿಮೆಯಾಗುತ್ತಲಿವೆ. ಕೊನೆಯ ಪಕ್ಷ ಇಡೀ ವಿಶ್ವಕ್ಕೆ ದೇವರು ಮತ್ತು ವಿಶ್ವದ ಎಲ್ಲ ಜೀವರಾಶಿಗಳ ಜೀವಾಳವಾಗಿರುವ ಸೂರ್ಯದೇವನಿಗೆ ಪ್ರತಿದಿನ ಸೂರ್ಯ ನಮಸ್ಕಾರ ರೂಢಿಸಿಕೊಂಡರೆ ನಾವು ಮತ್ತು ನಮ್ಮ ಸಮಾಜ ಆರೋಗ್ಯದಿಂದಿರಲು ಸಾಧ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಮೇಶ ಮೇರವಾಡೆ, ರವಿ ಹುಡೇದ, ವಿಷ್ಣುಪ್ರಕಾಶ ಹೆಬ್ಬಳ್ಳಿ, ಶಿವಲಿಂಗಪ್ಪ ಹುಡೇದ, ಎ.ಎಸ್. ಶೀಲವಂತರ, ಅರುಣಾ ಇಂಗಳಳ್ಳಿ, ಸಂಜನಾ ಸಜ್ಜನರ, ಜಯಶ್ರೀ ಡಾವಣಗೇರಿ, ವಿಜಯಾ ಚನ್ನಶೆಟ್ಟಿ, ವೀಣಾ ಮಾಲಿಪಾಟೀಲ, ಪುಷ್ಪಾ ತಿಪ್ಪಶೆಟ್ಟಿ, ವೀಣಾ ಗೌಡರ, ಪ್ರೇಮಾ ಗಾಣಿಗೇರ, ಸುಲೋಚನಾ ಕಾಲವಾಡ, ಮಾದೇವಿ ಚರಂತಿಮಠ, ಪ್ರತಿಭಾ ಇನಾಮತಿ, ವಿಜಯಲಕ್ಷ್ಮೀ ಮೇಕಳಿ, ಶೋಭಾ ಭಾಂಡಗೆ, ಸಂಗೀತಾ ನಾಕೋಡ ಸೇರಿದಂತೆ ಯೋಗ ಸಾಧಕ ಬಂಧುಗಳು ಪಾಲ್ಗೊಂಡಿದ್ದರು.

ಪ್ರಾರಂಭದಲ್ಲಿ ಸುನಂದಾ ಜ್ಯಾನೋಪಂತರ ಪ್ರಾರ್ಥನೆ ಹೇಳಿದರು. ಡಾ. ಎಂ.ವಿ. ಐಹೊಳ್ಳಿ ಸ್ವಾಗತಿಸಿದರು. ಕೆ.ಎಸ್. ಪಲ್ಲೇದ ಕಾರ್ಯಕ್ರಮ ನಿರೂಪಿಸಿದರು. ವಿ.ಎಂ. ಮುಂದಿನಮನಿ ವಂದಿಸಿದರು.

ವೇದಿಕೆಯಲ್ಲಿ ಉಪಸ್ಥಿತರಿದ್ದ ನಿವೃತ್ತ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ, ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ, ವೆಂಕಟೇಶ ಜಿತೂರಿ ಸಾಂದರ್ಭಿಕವಾಗಿ ಮಾತನಾಡಿದರು.

### ಪ್ರಶ್ನೆ ಪತ್ರಿಕೆ ಬಿಡಿಸುವ ಕಾರ್ಯಾಗಾರದಲ್ಲಿ ಸಿದ್ಧಲಿಂಗ ಬಂಡು ಮಸನಾಯಕ

## ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಂಗ್ಲೀಷ್ ವಿಷಯ ಕಬ್ಬಿಣದ ಕಡಲೆ ಎಂಬ ಕೀಳರಿಮೆ ತೊರೆದು ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಪರೀಕ್ಷೆಯನ್ನು ಎದುರಿಸಬೇಕು ಎಂದು ಗದಗ ಜಿಲ್ಲಾ ಶಾಲಾ ಶಿಕ್ಷಣ( ಪದವಿಪೂರ್ವ) ಇಲಾಖೆಯ ಉಪನಿರ್ದೇಶಕ ಸಿದ್ಧಲಿಂಗ ಬಂಡು ಮಸನಾಯಕ ಸಲಹೆ ನೀಡಿದರು.

ಇಲ್ಲಿಯ ಜನತಾ ವಿದ್ಯಾವರ್ಧಕ ಸಂಸ್ಥೆಯ ಬಿ.ಎಚ್. ಪಾಟೀಲ ಸಂಯುಕ್ತ ಪದವಿಪೂರ್ವ ಕಾಲೇಜಿನಲ್ಲಿ ಗದಗ ಜಿಲ್ಲಾ ಪದವಿಪೂರ್ವ ಆಂಗ್ಲ ಭಾಷಾ ಉಪನ್ಯಾಸಕರ ವೇದಿಕೆ, ಕೆ.ವಿ.ಎಸ್.ಆರ್ ಪಿಯು ಕಾಲೇಜು ತಿಮ್ಮಾಪೂರ ಹಾಗೂ ಬಿ.ಎಚ್. ಪಾಟೀಲ ಪಿ.ಯು. ಕಾಲೇಜು ಲಕ್ಕುಂಡಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಇಂಗ್ಲೀಷ್ ವಿಷಯ ಪ್ರಶ್ನೆ ಪತ್ರಿಕೆ ಬಿಡಿಸುವ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂಗ್ಲೀಷ್ ಭಾಷೆ ಕನ್ನಡಕ್ಕಿಂತಲೂ ಸರಳವಾಗಿದ್ದು, ಶ್ರದ್ಧೆಯಿಂದ ಓದಿದರೆ ಆತಂಕವಿಲ್ಲದೇ ಪರೀಕ್ಷೆಯಲ್ಲಿ ಅಧಿಕ ಅಂಕ ಗಳಿಸಬಹುದು. ಜಗತ್ತಿನಾದ್ಯಾಂತ ಇಂಗ್ಲೀಷ್ ಭಾಷೆಯು ಸಂಪರ್ಕ ಭಾಷೆಯಾಗಿ




ಬಳಕೆಯಾಗುತ್ತಿರುವದರಿಂದ ಪ್ರಸ್ತುತ ಸಮಯದಲ್ಲಿ ಅತ್ಯಂತ ಮಹತ್ವ ಪಡೆದಿದೆ. ದೈನಂದಿನ ಜೀವನದಲ್ಲಿ ಇಂಗ್ಲೀಷ್ ಬಳಸುವ ಮೂಲಕ ಭಾಷೆಯನ್ನು ಕರಗತ ಮಾಡಿಕೊಳ್ಳಬೇಕು. ವಾರ್ಷಿಕ ಪರೀಕ್ಷೆ ಸಮೀಪಿಸುತ್ತಿದ್ದು, ವಿದ್ಯಾರ್ಥಿಗಳು ಮದುವೆ, ಜಾತ್ರೆಗಳಂತಹ ಕಾರ್ಯಕ್ರಮಗಳಿಂದ ದೂರವಿದ್ದು ಓದಿನ ಕಡೆ ಹೆಚ್ಚಿನ ಗಮನ ಹರಿಸಬೇಕೆಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಆಂಗ್ಲ ಭಾಷಾ ಉಪನ್ಯಾಸಕರ ವೇದಿಕೆಯ ಕಾರ್ಯದರ್ಶಿ ರಮಾಕಾಂತ ದೊಡ್ಡಮನಿ, ಪ್ರತಿ ವರ್ಷದಂತೆ ಈ ವರ್ಷ ಕೂಡಾ ಜಿಲ್ಲೆಯಾದ್ಯಂತ ಪ್ರಶ್ನೆ ಪತ್ರಿಕೆ ಬಿಡಿಸುವ ಕಾರ್ಯಾಗಾರವನ್ನು ಹಮ್ಮಿಕೊಂಡಿದ್ದು, ದ್ವಿತೀಯ ಪಿಯುಸಿ ವಾರ್ಷಿಕ ಫಲಿತಾಂಶವನ್ನು ಹೆಚ್ಚಿಸಲು ಕಾರ್ಯಾಗಾರಗಳು ಪರಿಣಾಮಕಾರಿಯಾಗಿವೆ ಎಂದರು.

ಆಂಗ್ಲ ಭಾಷಾ ಉಪನ್ಯಾಸಕರ ವೇದಿಕೆಯ ಅಧ್ಯಕ್ಷ ಪ್ರಾಚಾರ್ಯ ಬಸವರಾಜ ಗಿರಿತಿಮ್ಮಣ್ಣವರ, ಜನತಾ ವಿದ್ಯಾವರ್ಧಕ ಸಂಸ್ಥೆಯ ಕಾರ್ಯದರ್ಶಿ ಪಿ.ಎಫ್. ತೋಪಿನ್, ನಿರ್ದೇಶಕರಾದ ವ್ಹಿ.ವ್ಹಿ. ಗಂಧದ,

ಕೆ.ಎಂ. ಪಾಟೀಲ, ಟಿ.ಎನ್. ಅಂಬಕ್ಕಿ ಉಪಸ್ಥಿತರಿದ್ದರು.

ಎ.ಎಂ. ನದಾಫ್ ಹಾಗೂ ಸುರೇಶ ಸಣ್ಣೆಲಿ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದರು. ಪ್ರಾಚಾರ್ಯ ಬಿ.ವ್ಹಿ. ಪಾಟೀಲ ಸ್ವಾಗತಿಸಿದರು. ಆರ್.ಎಸ್. ಚವಡಿ ನಿರೂಪಿಸಿದರು. ಎಸ್.ಎಚ್. ಮಲ್ಲಾಪೂರ ವಂದಿಸಿದರು.

ಅಧ್ಯಕ್ಷತೆ ವಹಿಸಿದ್ದ ಜನತಾ ವಿದ್ಯಾವರ್ಧಕ ಸಂಸ್ಥೆಯ ಅಧ್ಯಕ್ಷ ಆಯ್.ಎನ್. ಕುಂಬಾರ ಮಾತನಾಡಿ, ಇಂಗ್ಲೀಷ್ ಕಠಿಣ ಎಂಬ ಭೀತಿ ದೂರ ಮಾಡುವ ಉದ್ದೇಶದಿಂದ ಗ್ರಾಮೀಣ ಭಾಗದಲ್ಲಿ ಹೆಚ್ಚು ಹೆಚ್ಚು ಕಾರ್ಯಾಗಾರಗಳನ್ನು ಏರ್ಪಡಿಸುತ್ತಿರುವ ಆಂಗ್ಲ ಭಾಷಾ ಉಪನ್ಯಾಸಕರ ವೇದಿಕೆಯ ಕಾರ್ಯವನ್ನು ಶ್ಲಾಘಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka